ಸಭೆ, ಸಮಾರಂಭ, ಜಾತ್ರೋತ್ಸವ, ನೇಮೋತ್ಸವ, ಮದುವೆ ಹಾಗೂ ಇನ್ನಿತರ ಕಾರ್ಯಕ್ರಮಗಳ
ನೇರಪ್ರಸಾರ
ಮಾಡಲು ನಮ್ಮನ್ನು ಸಂಪರ್ಕಿಸಿ
ಮೊ: 9449387044, 9481741055
9980344970, 9164625996

ಅಮರ ಸುಳ್ಯ ಸುದ್ದಿ

AMARA SULLIA SUDDHI

ಸುಳ್ಯದ ಜನಪರ ಕನ್ನಡ ವಾರಪತ್ರಿಕೆ

Regd.No.PTR/126/2022-24
Licenced to Post under WPP
No. SK/WPP/PTR/156/2022-24

ಸಭೆ, ಸಮಾರಂಭ, ಜಾತ್ರೋತ್ಸವ, ನೇಮೋತ್ಸವ, ಮದುವೆ ಹಾಗೂ ಇನ್ನಿತರ ಕಾರ್ಯಕ್ರಮಗಳ
ನೇರಪ್ರಸಾರ
ಮಾಡಲು ನಮ್ಮನ್ನು ಸಂಪರ್ಕಿಸಿ
ಮೊ: 9449387044, 9481741055
9980344970, 9164625996

ಪ್ರಧಾನ ಸಂಪಾದಕರು : ಮುರಳೀಧರ ಅಡ್ಡನಪಾರೆ Email: amarasuddi@gmail.com Website : www.amarasuddi.com

Mob : 9449387044, Off. : 7338248044
Facebook : Amarasullia Suddi

RNI No. KAR KAN / 2012/ 49234 | ಸಂಪುಟ –21 | ಸಂಚಿಕೆ – 16 | 2024 ಡಿ.20ರಿಂದ ಡಿ.26ರವರೆಗೆ | Posted at SULLIA M.D.G. ON 20-12-2024 | ಪುಟ–6 | ಬೆಲೆ: ರೂ. 4.00

ಡಿ.21–22; ಬಜಪ್ಪಿಲ ಇರುವೆರ್ ಉಳ್ಳಾಕುಲು, ಧೂಮಾವತಿ ದೈವಗಳ ಪುನರ್ ಪ್ರತಿಷ್ಠಾ ಬ್ರಹ್ಮಕಲಶೋತ್ಸವ

ಪೇರಾಲು ಶ್ರೀ ಬಜಪ್ಪಿಲ ಇರುವೆರ್ ಉಳ್ಳಾಕುಲು,ಶ್ರೀ ಧೂಮಾವತಿ ಮತ್ತು ಪರಿವಾರ ದೈವಗಳ ಕ್ಷೇತ್ರದಲ್ಲಿ ಪುನರ್ ಪ್ರತಿಷ್ಠಾ ಬ್ರಹ್ಮಕಲಶೋತ್ಸವವು ಡಿ. 21 ಮತ್ತು 22 ರಂದು ವೇದಮೂರ್ತಿ ಬ್ರಹ್ಮಶ್ರೀ ಕುಂಟಾರು ವಾಸುದೇವ ತಂತ್ರಿ ಹಾಗೂ ವೇದಮೂರ್ತಿ ಬ್ರಹ್ಮಶ್ರೀ ಕುಂಟಾರು ರವೀಶ ತಂತ್ರಿಗಳರವರ ನೇತೃತ್ವದಲ್ಲಿ ವೈದಿಕ, ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ನಡೆಯಲಿದೆ ಎಂದು ಕ್ಷೇತ್ರದ ಅನುವಂಶಿಕ ಆಡಳಿತ ಮೊಕ್ತೇಸರ ಹೇಮಂತ್ ಕುಮಾರ್ ಗೌಡರಮನೆ ಹೇಳಿದರು. ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಪುನರ್ ಪ್ರತಿಷ್ಠಾ ಬ್ರಹ್ಮಕಲಶೋತ್ಸವದ ವಿವರ ನೀಡಿದರು. ಡಿ 21ರಂದು ಪೇರಾಲು ಅಂಬ್ರೋಟಿ ಶ್ರೀರಾಮ ಭಜನಾ ಮಂದಿರದ



ಬಳಿಯಿಂದ ವಾದ್ಯ ಘೋಷಗಳೊಂದಿಗೆ ಹಸಿರುವಾಣಿ ಮೆರವಣಿಗೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ದೊರೆಯಲಿದೆ. ಬೆಳಿಗ್ಗೆ ದೇವತಾ ಪ್ರಾರ್ಥನೆಯೊಂದಿಗೆ ಉಗ್ರಾಣ ತುಂಬಿಸುವುದು, ಮಧ್ಯಾಹ್ನ ಅನ್ನಸಂತರ್ಪಣೆ ನಡೆಯಲಿದ್ದು, ಅಂದು ಸಂಜೆ ತಂತ್ರಿಗಳು ಹಾಗೂ ಸ್ವಾಮೀಜಿಗಳನ್ನು ಪೂರ್ಣಕುಂಭದೊಂದಿಗೆ ಸ್ವಾಗತ ಮಾಡಲಿದ್ದೇವೆ ಎಂದರು. ನಂತರ ಪುಣ್ಯಾಹವಾಚನ, ಸ್ಥಳಶುದ್ಧಿ, ಪ್ರಾಸಾದ ಶುದ್ಧಿ, ವಾಸ್ತು ಬಲಿ, ರಾಕ್ಷೋಘ್ನ ಹೋಮ, ವಾಸ್ತು ಹೋಮ, ವಾಸ್ತು ಪುಣ್ಯಾಹಾಂತ ಕಾರ್ಯಕ್ರಮ ನಡೆಯಲಿದೆ. ಅಂದು ರಾತ್ರಿ ನಡೆಯುವ ಸಭಾ ಕಾರ್ಯಕ್ರಮವನ್ನು ಶ್ರೀ ಆದಿಚುಂಚನಗಿರಿ ಶಾಖಾಮಠ ಧರ್ಮಪಾಲನಾಥ ಸ್ವಾಮೀಜಿಗಳು ಉದ್ಘಾಟಿಸಿ ಆಶೀರ್ವಚನ ನೀಡಲಿದ್ದಾರೆ. ಬಜಪ್ಪಿಲ ಕ್ಷೇತ್ರದ ಅನುವಂಶಿಕ ಆಡಳಿತ ಮೊಕೇಸರ ಹೇಮಂತ್‌ಕುಮಾರ್ ಗೌಡರವನ (3ನೇ ಪುಟಕ್ಕೆ)

ಸುಳ್ಯ ಶ್ರೀ ಚೆನ್ನಕೇಶವ ದೇವಸ್ಥಾನಕ್ಕೆ ನೂತನ ಬ್ರಹ್ಮರಥ ಸಮರ್ಪಣೆ – ಡಿ.25 ರಂದು ಸುಳ್ಯಕ್ಕೆ ಬ್ರಹ್ಮರಥ ಆಗಮನ

ಸುಳ್ಯ ಅಕಾಡೆಮಿ ಆಫ್ ಲಿಬರಲ್ ಎಜ್ಯುಕೇಶನ್ ಅಧ್ಯಕ್ಷರಾಗಿರುವ ಡಾ. ಕೆ.ವಿ. ಚಿದಾನಂದ ಹಾಗೂ ಮನೆಯವರು ಸುಳ್ಯ ಶ್ರೀ ಚೆನ್ನಕೇಶವ ದೇವಸ್ಥಾನಕ್ಕೆ ನೂತನ ಬ್ರಹ್ಮರಥ–'ವನ್ನು ಕೊಡುಗೆಯಾಗಿ ನೀಡಲಿದ್ದು, ಬ್ರಹ್ಮರಥ ಸುಳ್ಯಕ್ಕೆ ಆಗಮಿಸುವ ಹಾಗೂ ಸಮರ್ಪಣೆ ಸಿದ್ಧತೆಯ ಕುರಿತು ಭಕ್ತಾಧಿಗಳ ಸಭೆಯು ಸುಳ್ಯದ ಚೆನ್ನಕೇಶವ ದೇವಸ್ಥಾನ ಸಭಾಂಗಣದಲ್ಲಿ ಡಿ.6ರಂದು ನಡೆಯಿತು. ಕೋಟೇಶ್ವರದ ಕುಂಭಾಶಿಯಲ್ಲಿ ರಥಶಿಲ್ಪಿ ರಾಜಗೋಪಾಲಾಚಾರ್ಯರ ಉಸ್ತುವಾರಿಯಲ್ಲಿ ಬ್ರಹ್ಮರಥ ನಿರ್ಮಾಣವಾಗುತ್ತಿದ್ದು, ಡಿ.23ರಂದು ಬ್ರಹ್ಮರಥ ಸುಳ್ಯಕ್ಕೆ ತರುವ ನಿಟ್ಟಿನಲ್ಲಿ ಸುಳ್ಯದಿಂದ

ಕುರುಂಜಿ ಕುಟುಂಬದವರು ಹಾಗೂ ದೇವಸ್ಥಾನದ ಭಕ್ತರು ತೆರಳಿ ಅಲ್ಲಿ ಪೂಜೆ ನಡೆಯುವುದು. ಡಿ.24ರಂದು ಬೆಳಗ್ಗೆ ಕುಂಭಾಶಿಯಿಂದ ಬ್ರಹ್ಮರಥ ಹೊರಡಲಿದ್ದು ರಾತ್ರಿ ವೇಳೆಗೆ ಪುತ್ತೂರು ತಲುಪುತ್ತದೆ. ಅಂದು ಪುತ್ತೂರಿನಲ್ಲಿ ಬ್ರಹ್ಮರಥ ಇರುತ್ತದೆ. ಮರುದಿನ ಡಿ.25ರಂದು ಸುಳ್ಯದತ್ತ ಬ್ರಹ್ಮರಥ ಆಗಮಿಸುತ್ತದೆ. ಮಧ್ಯಾಹ್ನ ವೇಳೆಗೆ ಜಾಲ್ಸೂರಿಗೆ ತಲುಪುತ್ತದೆ. ಅಲ್ಲಿಂದ ಅದ್ದೂರಿ ಸ್ವಾಗತದೊಂದಿಗೆ ವಾಹನ ಮೆರವಣಿಗೆಯೊಂದಿಗೆ ಬ್ರಹ್ಮರಥ ಸುಳ್ಯಕ್ಕೆ ಬರಲಿದೆ. ಡಿ.31ರಂದು ಕುರುಂಜಿಯವರು ಕುಟುಂಬದವರು ರಥವನ್ನು ದೇವಸ್ಥಾನಕ್ಕೆ ಸಮರ್ಪಣೆ ಮಾಡಲಿದ್ದಾರೆ. 2025ರ ಜನವರಿ 1ರಂದು ರಥದ ಆಲಯದಲ್ಲಿ ವಾಸ್ತುಪೂಜೆ ನಡೆಯಲಿದ್ದು (3ನೇ ಪುಟಕ್ಕೆ)

ಜ.4,5 ರಂದು ರಂಗಮನೆಯಲ್ಲಿ ನೀನಾಸಂ ನಾಟಕೋತ್ಸವ

ರಂಗಮನೆ ಸಾಂಸ್ಕೃತಿಕ ಕಲಾ ಕೇಂದ್ರ (ರಿ.) ಸುಳ್ಯ ಇದರ ಆಶ್ರಯದಲ್ಲಿ ಜನವರಿ 4 ಮತ್ತು 5 ರಂದು ಸಂಜೆ 6.45 ಕ್ಕೆ ನೀನಾಸಂ ತಿರುಗಾಟ ತಂಡದ ನಾಟಕೋತ್ಸವವನ್ನು ಏರ್ಪಡಿಸಲಾಗಿದೆ. ಜ.04 ರಂದು ಮೂಲ ಭವಭೂತಿಯ, ಅಕ್ಷರ ಕೆ.ವಿ.ಇವರು ನಿರ್ದೇಶಿಸಿದ ಮಾಲತಿ ಮಾಧವ ಹಾಗೂ ಜ.05 ರಂದು ಜಯಂತ್ ಕಾಯ್ಕಿಣಿ ಕನ್ನಡಕ್ಕೆ ಅನುವಾದಿಸಿದ, ಮೂಲ ಅಭಿರಾಮ್ ಭಡ್ಕಮ್ಕರ್ ರಚಿಸಿದ, ವಿದ್ಯಾನಿಧಿ ವನಾರಸ್ ನಿರ್ದೇಶಿಸಿದ ಅಂಕದ ಪರದೆ ನಾಟಕಗಳ ಪ್ರದರ್ಶನ ನಡೆಯಲಿದೆ. ಎರಡೂ ನಾಟಕಗಳು ರಾಜ್ಯದಾದ್ಯಂತ ಬಹಳ ಪ್ರಸಿದ್ಧಿ ಪಡೆದ ಪ್ರಯೋಗಗಳಾಗಿವೆ.

ನಾಟಕಗಳಲ್ಲಿ ಸುಳ್ಯ ರಂಗಮನೆಯ ಪ್ರತಿಭೆ ನಟಿ ಮಮತಾ ಕಲ್ಮಕಾರು ಇವರು ಮುಖ್ಯಪಾತ್ರದಲ್ಲಿ (3ನೇ ಪುಟಕ್ಕೆ)

ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆಗೆ ಶ್ರೀಚೆನ್ನಕೇಶವ ದೇವಸ್ಥಾನದ ನೂತನ ಬ್ರಹ್ಮರಥ ಸಮರ್ಪಣಾ ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ನೀಡಿ ಆಶೀರ್ವಾದ ಪಡೆದುಕೊಂಡ ಕುರುಂಜಿ ಕುಟುಂಬ

ಸುಳ್ಯ: ಡಾ. ಕೆ.ವಿ ಚಿದಾನಂದ ಮತ್ತು ಮನೆಯವರಿಂದ ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆಗೆ ಶ್ರೀಚೆನ್ನಕೇಶವ ದೇವಸ್ಥಾನದ ಬ್ರಹ್ಮರಥ ಸಮರ್ಪಣಾ ಕಾರ್ಯಕ್ರಮದ ಆಹ್ವಾನ, ಆಮಂತ್ರಣ ಪತ್ರಿಕೆ ನೀಡಿ ಆಶೀರ್ವಾದವನ್ನು ಕುರುಂಜಿ ಕುಟುಂಬವು ಪಡೆದುಕೊಂಡರು .ಸುಳ್ಯದ ಇತಿಹಾಸ ಪ್ರಸಿದ್ಧ ದೇವಸ್ಥಾನವಾಗಿರುವ ಶ್ರೀ ಚೆನ್ನಕೇಶವ ದೇವಸ್ಥಾನಕ್ಕೆ ಅಕಾಡೆಮಿ ಆಫ್ ಲಿಬರಲ್

ಎಜ್ಯುಕೇಶನ್ (ರಿ) ಸುಳ್ಯ ಇದರ ಅಧ್ಯಕ್ಷ ಹಾಗೂ ಹಾಲಿ ಶ್ರೀ ಚೆನ್ನಕೇಶವ ದೇವಸ್ಥಾನದ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಡಾ. ಕೆ.ವಿ. ಚಿದಾನಂದ ಮತ್ತು ಮನೆಯವರು ನೂತನ ಬ್ರಹ್ಮರಥ ಮತ್ತು ಪಲ್ಲಕ್ಕಿಯನ್ನು ಸಮರ್ಪಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆ ಅವರಿಗೆ ಬುಧವಾರ ಆಮಂತ್ರಣ ಪತ್ರಿಕೆಯನ್ನು ನೀಡಿ ಆಶೀರ್ವಾದ ಪಡೆದುಕೊಳ್ಳಲಾಯಿತು. ಅಕಾಡೆಮಿ ಆಫ್ ಲಿಬರಲ್ ಎಜ್ಯುಕೇಶನ್ (ರಿ) ಸುಳ್ಯ ಇದರ ಅಧ್ಯಕ್ಷರಾಗಿರುವ ಡಾ. ಕೆ.ವಿ. ಚಿದಾನಂದ, ಎಒಎಲ್‌ಇ ಉಪಾಧ್ಯಕ್ಷೆ ಶೋಭಾ ಚಿದಾನಂದ, ಎಒಎಲ್‌ಇ ಪ್ರಧಾನ ಕಾರ್ಯದರ್ಶಿ ಅಕ್ಷಯ್ ಕೆ.ಸಿ, ಚೆನ್ನಕೇಶವ ದೇವಳದ ಅನುವಂಶಿಕ ಆಡಳಿತ ಮೊಕ್ತೇಸರ ಡಾ ಹರಪ್ರಸಾದ್ ತುದಿಯಡ್ಕ ಸೇರಿದಂತೆ ಗಣ್ಯರು ಹಾಜರಿದ್ದರು.

ಕೆ.ವಿ.ಜಿ. ಸುಳ್ಯ ಹಬ್ಬ ಆಮಂತ್ರಣ ಬಿಡುಗಡೆ

ಕೆ.ವಿ.ಜಿ. ಸುಳ್ಯ ಹಬ್ಬ ಸಮಾಜ ಸೇವಾ ಸಂಘದ ಆಶ್ರಯದಲ್ಲಿ ದಿ.ಡಾ. ಕುರುಂಜಿ ವೆಂಕಟ್ರಮಣ ಗೌಡರ ಜನ್ಮ ದಿನಾಚರಣೆ ಪ್ರಯುಕ್ತ ಕೆ.ವಿ.ಜಿ. ಸುಳ್ಯ ಹಬ್ಬವನ್ನು ದ.25 ಮತ್ತು ದ.26 ರಂದು ಏರ್ಪಡಿಸಲಾಗುತ್ತಿದ್ದು, ಈ ಬಾರಿಯ ಸುಳ್ಯಹಬ್ಬದ ಆಮಂತ್ರಣ ಪತ್ರ ಬಿಡುಗಡೆ ಇಂದು ನಡೆಯಿತು.ಸಮಿತಿಯ ಗೌರವಾಧ್ಯಕ್ಷ ಡಾ.ಕೆ.ವಿ.ಚಿದಾನಂದರು ಆಮಂತ್ರಣ ಪತ್ರ ಬಿಡುಗಡೆಗೊಳಿಸಿದರು. ಸಮಿತಿಯ ಸ್ಥಾಪಕಾಧ್ಯಕ್ಷ ಎನ್. ಜಯಪ್ರಕಾಶ ರೈ ಮತ್ತು ಮಾಜಿ ಅಧ್ಯಕ್ಷೆ ಶ್ರೀಮತಿ ಮೀನಾಕ್ಷಿ ಗೌಡರು ಶುಭಹಾರೈಸಿದರು. ಸಮಿತಿ ಅಧ್ಯಕ್ಷ

ಡಾ.ಜ್ಞಾನೇಶ್ ಎನ್.ಎ. ಅಧ್ಯಕ್ಷತೆ ವಹಿಸಿದ್ದರು. ಪ್ರಧಾನ ಕಾರ್ಯದರ್ಶಿ ರಾಜು ಪಂಡಿತ್, ಕೋಶಾಧಿಕಾರಿ ಎಂ.ಎನ್.ಶ್ರೀಕೃಷ್ಣ, ಉಪಸಮಿತಿ ಸಂಚಾಲಕರುಗಳು, ಮಾಜಿ ಅಧ್ಯಕ್ಷರುಗಳು, ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಮಂಡೆಕೋಲು ಶ್ರೀ ಅಯ್ಯಪ್ಪ ಸ್ವಾಮಿ ಮಂದಿರದಲ್ಲಿ ಜ.5 ರಂದು ಪ್ರತಿಷ್ಠಾ ವಾರ್ಷಿಕೋತ್ಸವ ಮತ್ತು ಸಾರ್ವಜನಿಕ ಶ್ರೀ ಶನೈಶ್ಚರ ಪೂಜೆ

ಶ್ರೀ ಶಬರಿಗಿರಿ ಸೇವಾ ಪ್ರತಿಷ್ಠಾನ ಇದರ ಆಶ್ರಯದಲ್ಲಿರುವ ಶ್ರೀ ಅಯ್ಯಪ್ಪ ಸ್ವಾಮಿ ಮಂದಿರ ಕಣಿಮರಡ್ಕ, ಮಂಡೆಕೋಲು ಇಲ್ಲಿ 3ನೇ ವರ್ಷದ ಪ್ರತಿಷ್ಠಾ ವಾರ್ಷಿಕೋತ್ಸವ ಮತ್ತು ಲೋಕಕಲ್ಯಾಣಾರ್ಥವಾಗಿ ಸಾರ್ವಜನಿಕ ಶ್ರೀ ಶನೈಶ್ಚರ ಪೂಜೆ ಜ.5ರಂದು ನಡೆಯಲಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷರಾದ ಸುರೇಶ್ ಕಣಿಮರಡ್ಕ ತಿಳಿಸಿದರು. ದ.12 ರಂದು ಪ್ರೆಸ್ ಕ್ಲಬ್ ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಾ ಸುಮಾರು 52 ವರ್ಷಗಳ ಹಿಂದೆ ಆರಂಭವಾದ ಭಜನಾ ಮಂದಿರದಲ್ಲಿ ಕಳೆದ ಮೂರು ವರ್ಷಗಳಿಂದ ವಾರ್ಷಿಕ ಪ್ರತಿಷ್ಠಾ ವಾರ್ಷಿಕೋತ್ಸವ ನಡೆದುಕೊಂಡು ಬರುತ್ತಿದ್ದು, ಜ.5ರಂದು ಬೆಳಿಗ್ಗೆ ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ ಗಣಪತಿ ಹವನ, ಗುಳಿಗ ದೈವದ ಕಟ್ಟಿಗೆ ಪೂಜೆ, ತಂಬಿಲ, ಶ್ರೀ ಶನೈಶ್ಚರ ಪೂಜೆ,

ಮಧ್ಯಾಹ್ನ ಮಹಾಪೂಜೆ, ಭಜನಾ ಸಂಕೀರ್ತನೆ, ಅನ್ನಸಂತರ್ಪಣೆ ನಡೆಯಲಿದೆ. ಅಪರಾಹ್ನ 2 ಗಂಟೆಗೆ ಧಾರ್ಮಿಕ ಸಭಾ ಕಾರ್ಯಕ್ರಮ ಮತ್ತು ಗುರುವಂದನೆ ಹಾಗೂ ಪ್ರತಿಭಾ ಪುರಸ್ಕಾರ ನಡೆಯಲಿದೆ. ಸಭಾ ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್ ನೆರವೇರಿಸಲಿದ್ದು, ಧಾರ್ಮಿಕ ಉಪನ್ಯಾಸವನ್ನು ಖ್ಯಾತ ವಾಗ್ಮಿಗಳಾದ ದಯಾನಂದ ಕತ್ತಲ್ ಸರ್ ನೀಡಲಿದ್ದಾರೆ.ಶಾಸಕಿ ಕು.ಭಾಗೀರಥಿ ಮುರುಳ್ಯ ಸಹಿತ ಹಲವಾರು ಗಣ್ಯರು ಭಾಗವಹಿಸಿದ್ದು ಬಳಿಕ ಸಾಯಂಕಾಲ ವಿವಿಧ ಭಜನಾ ತಂಡಗಳಿಂದ ಭಜನಾ ಕಾರ್ಯಕ್ರಮ ನಡೆಯಲಿರುವುದಾಗಿ ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಉಪಾಧ್ಯಕ್ಷ ಶಿವಪ್ರಸಾದ್ ಉಗ್ರಾಣಿಮನೆ,ಪ್ರಧಾನ ಕಾರ್ಯದರ್ಶಿ ಪ್ರಕಾಶ್ ಕಣಿಮರಡ್ಕ ,ಟ್ರಸ್ಟಿ ಅನಿಲ್ ತೋಟಪ್ಪಾಡಿ, ಪ್ರೀತೇಶ್, ಸಂತೋಷ್, ಪ್ರವೀಣ್ ಮುಳ್ಳ ಉಪಸ್ಥಿತರಿದ್ದರು.

ಎರಡನೇ ಬಾರಿಗೆ ರಾಜ್ಯ ಒಕ್ಕಲಿಗರ ಸಂಘದ ಉಪಾಧ್ಯಕ್ಷರಾಗಿ ಆಯ್ಕೆಯಾದ ಡಾ. ರೇಣುಕಾಪ್ರಸಾದ್ ಕೆ.ವಿ.

ರಾಜ್ಯ ಒಕ್ಕಲಿಗರ ಸಂಘದ ಉಪಾಧ್ಯಕ್ಷರಾಗಿ ಅಕಾಡೆಮಿ ಸುಳ್ಯದ ಆಫ್ ಲಿಬರಲ್ ಎಜ್ಯುಕೇಷನ್ ಕಮಿಟಿ 'ಬಿ' ಅಧ್ಯಕ್ಷರಾದ ಡಾ. ರೇಣುಕಾಪ್ರಸಾದ್ ಕೆ.ವಿ. ಆಯ್ಕೆಯಾಗಿದ್ದಾರೆ.ಒಕ್ಕಲಿಗರ ಸಂಘದ ಉಪಾಧ್ಯಕ್ಷರಾಗಿ ಡಾ.ರೇಣುಕಾ ಪ್ರಸಾದ್ ಎರಡನೇ ಬಾರಿ ಆಯ್ಕೆಯಾಗಿದ್ದಾರೆ. ಒಕ್ಕಲಿಗರ

ಸಂಘದ ನಿರ್ದೇಶಕರಾಗಿ ಮೂರು ಬಾರಿ ಆಯ್ಕೆಯಾಗಿದ್ದರು. ಎರಡು ಅವಧಿಗೆ ಅವಿರೋಧವಾಗಿ ಮತ್ತು ಮೂರನೇ ಅವಧಿಗೆ ಬಹುಮತದಿಂದ ಚುನಾಯಿತರಾಗಿದ್ದ ಡಾ. ರೇಣುಕಾಪ್ರಸಾದ್ ಕೆ.ವಿ.ಯವರು ಮೊದಲ ಅವಧಿಯಲ್ಲಿ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದರು. ಇಂದು ನಡೆದ ಅಧ್ಯಕ್ಷ ಉಪಾಧ್ಯಕ್ಷ ಮತ್ತು ಪದಾಧಿಕಾರಿಗಳ ಆಯ್ಕೆಯಲ್ಲಿ ಡಾ. ರೇಣುಕಾಪ್ರಸಾದ್ ಕೆ.ವಿ. ಯವರು 21–14 ಮತಗಳ ಅಂತರದಿಂದ ಉಪಾಧ್ಯಕ್ಷರಾಗಿ 2ನೇ ಬಾರಿಗೆ ಆಯ್ಕೆಯಾಗಿದ್ದಾರೆ.

ಶ್ರೀ ವಿಷ್ಣು ಕನ್ಸ್ಟ್ರಕ್ಷನ್
ಅಜ್ಜಾವರ, ಸುಳ್ಯ
ವಿವಿಧ ವಿನ್ಯಾಸದ ಇಂಟರ್‌ಲಾಕ್ ಲಭ್ಯವಿದ್ದು, ಅಳವಡಿಸಿ ಕೊಡಲಾಗುವುದು.
ಕಾಳುಮೆಣಸು ಕೃಷಿಗೆ 15 ಫೀಟ್ ಎತ್ತರದ ಲೈಟ್ ವೈಟ್ ಕಂಬ ತಯಾರಿಸಿ ಕೊಡಲಾಗುವುದು.
ಮಾ : ನಿಖಿಲ್ ಎಂ.ಜೆ.
ಮೊ: 9731922876

ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ಇಲಾಖೆ, ಕರ್ನಾಟಕ ಸರಕಾರ
ಸುಳ್ಯ ಸೀಮೆ ಮಹತೋಭಾರ ಶ್ರೀ ಮಲ್ಲಿಕಾರ್ಜುನ ದೇವಸ್ಥಾನ, ತೊಡಿಕಾನ
ಸುಳ್ಯ ತಾಲೂಕು ದ.ಕ
ಶ್ರೀಕ್ಷೇತ್ರದಲ್ಲಿ
16-12-2024ರಿಂದ 14-01-2025ರ ತನಕ
ಧನುಪೂಜೆ ಜರಗಲಿರುವುದು.
ಸಮಯ: ಪ್ರತಿದಿನ ಬೆಳಗ್ಗೆ ಗಂಟೆ 5.00ಕ್ಕೆ ಸರಿಯಾಗಿ
ಧನುಪೂಜೆ ಮಾಡಿಸುವ ಭಕ್ತಾದಿಗಳು ದೇವಾಲಯದ ಕಛೇರಿಯಿಂದ ರೂ.500ರ ರಶೀದಿ ಪಡೆದು ಸಮಯಕ್ಕೆ ಸರಿಯಾಗಿ ಹಾಜರಿರತಕ್ಕದ್ದು
ಹೆಚ್ಚಿನ ಮಾಹಿತಿಗೆ ಫೊ: 08257–295242 9483140142 ಸಂಪರ್ಕಿಸುವುದು.
ಸರ್ವರಿಗೂ ಆದರದ ಸ್ವಾಗತ ಬಯಸುವ
ಶ್ರೀ ಪಿ.ಬಿ.ದಿವಾಕರ ರೈ
ಅಧ್ಯಕ್ಷರು/ ಜೀರ್ಣೋದ್ಧಾರ ಸಮಿತಿ ಹಾಗೂ ಸರ್ವಸದಸ್ಯರು
ಅವಿನ್ ರಂಗತ್ತಮಲೆ
ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ
ಆಮಂತ್ರಣ ಸಿಗದ ಭಕ್ತಾಭಿಮಾನಿಗಳು ಇದನ್ನೇ ವೈಯುಕ್ತಿಕ ಆಮಂತ್ರಣವೆಂದು ತಿಳಿದು ಆಗಮಿಸಬೇಕಾಗಿ ವಿನಂತಿ
ಸುಳ್ಯದಿಂದ ಬರುವ ಭಕ್ತಾದಿಗಳಿಗೆ ಬೆಳಗ್ಗೆ ಗಂಟೆ 4ಕ್ಕೆ ಅವಿನಾಶ್ ಬಸ್ ವ್ಯವಸ್ಥೆ ಇದೆ.
ವಿ.ಸೂ.: ಶ್ರೀ ಕ್ಷೇತ್ರಕ್ಕೆ ಅನ್ನದಾನ ದೇಣಿಗೆ ಹಾಗೂ ಇನ್ನಿತರ ಯಾವುದೇ ದೇಣಿಗೆ ನೀಡುವವರು ದೇವಸ್ಥಾನದ ಈ ಕೆಳಗಿನ ಉಳಿತಾಯ ಖಾತೆಗೆ ಜಮಾ ಮಾಡಿ ದೇವಸ್ಥಾನಕ್ಕೆ ತಿಳಿಸಬೇಕಾಗಿ ವಿನಂತಿ, ಬ್ಯಾಂಕ್ ಆಫ್ ಬರೋಡ (ತೊಡಿಕಾನ ಶಾಖೆ)
M/S Mallikarjuna Temple Thodikana, Thodikana Branch,
SB A/C NO: 70500100000178 IFSC: BARBOVJTHOD

ಸಂಪಾಜೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ.
ಸಂಪಾಜೆ, ಸುಳ್ಯ ತಾಲೂಕು
ಆಡಳಿತ ಮಂಡಳಿ ಚುನಾವಣೆ – 2024
ಸಹಕಾರಿಗಳ ಅಭಿವೃದ್ಧಿ ರಂಗ ಸಂಪಾಜೆ
ಜಾನಿ ಕೆ.ಪಿ. (ಸಾಮಾನ್ಯ) 3
ಮಹಮ್ಮದ್ ಕುಂಞ (ಸಾಮಾನ್ಯ) 5
ಕೆ.ಸಂಜೀವ ಪೂಜಾರಿ (ಸಾಮಾನ್ಯ) 10
ಲಿಲ್ಲೆಸ್ಟ್ ಡಿ.ಸೋಜಾ (ಸಾಮಾನ್ಯ) 11
ಸೋಮಶೇಖರ ಕೊಂಗಾಜೆ (ಸಾಮಾನ್ಯ) 12
ಜ್ಞಾನೇಶ್ (ರಾಜು) (ಸಾಮಾನ್ಯ) 13
ಪ್ರಮೀಳಾ ಪೆಲ್ತಡ್ಕ (ಮಹಿಳಾ ಮೀಸಲು) 2
ಬಿ.ಎಸ್. ಯಮುನಾ (ಮಹಿಳಾ ಮೀಸಲು) 3
ಸಾಮಾನ್ಯ ಕ್ಷೇತ್ರಕ್ಕೆ – 6 ಮತದಾನ
ಮಹಿಳಾ ಮೀಸಲು ಕ್ಷೇತ್ರಕ್ಕೆ– 2 ಮತದಾನ
ಹಿಂ.ವರ್ಗ ಪ್ರವರ್ಗ ಎ –1 ಮತದಾನ
ಹಿಂ.ವರ್ಗ ಪ್ರವರ್ಗ ಬಿ – 1 ಮತದಾನ
ಪರಿಶಿಷ್ಟ ಜಾತಿ –1 ಮತದಾನ
ಪರಿಶಿಷ್ಟ ಪಂಗಡ – 1 ಮತದಾನ
ಅಬ್ಬಾಸಾಲಿ ಪಿ.ಕೆ. (ಹಿಂವರ್ಗ ಪ್ರವರ್ಗ ಎ) 1
ಜಗದೀಶ್ ರೈ ಕೆ.ಆರ್ (ಹಿಂವರ್ಗ ಬಿ) 2
ಉಷಾ ರಾಮ ನಾಯ್ಕ (ಪ.ಜಾತಿ) 1
ಸುಶ

ಸುಳ್ಯ : ತಾಲೂಕು ಮಟ್ಟದ ಪ.ಜಾತಿ/ಪಂಗಡದ ಮಾಸಿಕ ಕುಂದು ಕೊರತೆ ಸಭೆ

ಸುಳ್ಯ ತಾಲೂಕು ಮಟ್ಟದ ಪ.ಜಾತಿ ಮತ್ತು ಪ.ಪಂಗಡದವರ ಕುಂದುಕೊರತೆಗಳ ಸಭೆಯು ಸುಳ್ಯ ಠಾಣಾಧಿಕಾರಿ ಸಂತೋಷ್ ರವರ ನೇತೃತ್ವದಲ್ಲಿ ನಡೆಯಿತು. ಸಭೆಯಲ್ಲಿ ಮಾತನಾಡಿದ ಅವರು ಪ್ರಮುಖ ಕಾನೂನು ಸಲಹೆಗಳು ಮತ್ತು ಎಸ್ಸಿ ಎಸ್ಟಿ ಸಮುದಾಯದ ಪ್ರಮುಖರಿಗೆ ಕಾನೂನಿನ ಅರಿವು ಮೂಡಿಸುವ ಸಲುವಾಗಿ ನಾಯಕರು ಶ್ರಮ ವಹಿಸಬೇಕು ಎಂದು ತಿಳಿಸಿದರು. ಮುಂದೆ ಪ್ರತಿ ಗ್ರಾಮವಾರು ಪಂಚಾಯತ್ ಸದಸ್ಯರ ನೇತೃತ್ವದಲ್ಲಿ ಮಾಹಿತಿ ನೀಡುವ ಮತ್ತು 94ಸಿ ಮತ್ತು ಸಮಾಜ ಕಲ್ಯಾಣ ಇಲಾಖೆಯ ಸೌಲಭ್ಯಗಳ ಮಾಹಿತಿ ಕೊರತೆ ಇದೆ ಆ ಹಿನ್ನೆಲೆಯಲ್ಲಿ ಅವರನ್ನು ಮುಂದಿನ ಸಭೆಗೆ ಕರೆಸುವ ಕೆಲಸ ಆಗಬೇಕಿದೆ ಎಂದು ಆಗ್ರಹಿಸಿದರು. ಇದಕ್ಕೆ ಠಾಣಾಧಿಕಾರಿಗಳು ಒಪ್ಪಿಗೆ ಸೂಚಿಸಿ ಗ್ರಾಮ ಪಂಚಾಯತ್ ಸದಸ್ಯರ ಮೂಲಕ ಅರಿವು ಮೂಡಿಸುವ ಕೆಲಸಗಳು ಮತ್ತು ಜಾಗೃತಿ ಮೂಡಿಸುವ ಕೆಲಸ ಕಾರ್ಯಗಳನ್ನು ಮಾಡುತ್ತೇವೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಪ್ರಮುಖರಾದ ನಂದರಾಜ್ ಸಂಕೇಶ್ , ಶಂಕರ್ ಪೆರಾಜೆ , ಚಂದ್ರಶೇಖರ ಪಲ್ಲತಡ್ಕ , ಹರೀಶ್ ಮೇನಾಲ , ಕೊರಗಪ್ಪ ಕೆ , ಗಣೇಶ್ , ಕರುಣಾಕರ ಪಲ್ಲತ್ತಡ್ಕ , ರಮೇಶ್ ದೊಡ್ಡೆರಿ , ಸತೀಶ್ ಬೂಡುಮಕ್ಕಿ , ಅಜ್ಜಾವರ ಬೀಟ್ ಪೋಲಿಸ್ ಮಹದೇವ್ ಪ್ರಸಾದ್ , ಸುಳ್ಯ ಠಾಣೆಯ ಎಸ್ ಬಿ ಪ್ರಕಾಶ್ ಮತ್ತಿತರರು ಉಪಸ್ಥಿತರಿದ್ದರು.

ಬೆಳ್ಳಾರೆ : ಬಿಜೆಪಿ ಬೆಂಬಲಿತ ಸಹಕಾರ ಭಾರತಿ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ

ಬೆಳ್ಳಾರೆ ಪ್ರಾ.ಕೃ.ಪ.ಸಹಕಾರಿ ಸಂಘದ ಆಡಳಿತ ಮಂಡಳಿಗೆ ಡಿ. 25ರಂದು ಚುನಾವಣೆ ನಡೆಯಲಿದ್ದು, ಬಿಜೆಪಿ ಬೆಂಬಲಿತ ಸಹಕಾರ ಭಾರತಿ ಅಭ್ಯರ್ಥಿಗಳಾದ ಸಾಲಗಾರರ ಕ್ಷೇತ್ರದಿಂದ ಸಾಮಾನ್ಯ ಸ್ಥಾನಕ್ಕೆ ಪದ್ಮನಾಭ ಶೆಟ್ಟಿ, ನಾರಾಯಣ ಕೊಂಡೆಪ್ಪಾಡಿ, ದಯಾಕರ ಆಳ್ವ, ಆರ್.ಕೆ. ಭಟ್ ಕುರುಂಬುಡೇಲು, ಸಾಯಿಪ್ರಸಾದ್ ರೈ, ಜನಾರ್ಧನ ಗೌಡ, ಹಿಂದುಳಿದ ವರ್ಗ ಬಿ ಸ್ಥಾನಕ್ಕೆ ಭಾಸ್ಕರ ನೆಟ್ಟಾರು, ಹಿಂದುಳಿದ ವರ್ಗ ಎ ಸ್ಥಾನಕ್ಕೆ ವಾಸುದೇವ ನಾಯಕ್, ಸಾಮಾನ್ಯ ಮಹಿಳಾ ಸ್ಥಾನಕ್ಕೆ ಭಾರತಿ ಕೊಚ್ಚಿ ಮತ್ತು ವನಿತಾ, ಪರಿಶಿಷ್ಟ ಪಂಗಡದ ಸ್ಥಾನಕ್ಕೆ ಸುಂದರ ನಾಗನಮಜಲು ಮತ್ತು ಪರಿಶಿಷ್ಟ ಜಾತಿಯ ಸ್ಥಾನಕ್ಕೆ ಬಿಯಾಳು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದರು.

ಎಣ್ಮೂರು ಸರಕಾರಿ ಪ್ರೌಢಶಾಲೆಯ ಇಬ್ಬರು ವಿದ್ಯಾರ್ಥಿಗಳು ರಾಜ್ಯ ಮಟ್ಟಕ್ಕೆ ಆಯ್ಕೆ

ಶಿಕ್ಷಣ ಇಲಾಖೆಯು ಇತ್ತೀಚೆಗೆ ನಡೆಸಿದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿಯ ಮಿಮಿಕ್ರಿ ಸ್ಪರ್ಧೆಯಲ್ಲಿ ಸರಕಾರಿ ಪ್ರೌಢಶಾಲೆ ಎಣ್ಮೂರು ಇಲ್ಲಿನ ಹತ್ತನೇ ತರಗತಿ ವಿದ್ಯಾರ್ಥಿ ವಿನ್ಯಾಸ್ ಜಾಕೆ ಪ್ರಥಮ ಸ್ಥಾನ ಪಡೆದುರಾಜ್ಯ ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಅದೇ ರೀತಿ ಜಿಲ್ಲಾ ಮಟ್ಟದ ಪ್ರಾಚ್ಯ ಪ್ರಜ್ಞೆಯ ಪ್ರಬಂಧ ಸ್ಪರ್ಧೆಯಲ್ಲಿ ಹತ್ತನೇ ತರಗತಿಯ ಸಾಕ್ಷಿ ಕೆ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ.

ಪ್ರತಿಷ್ಠಿತ "ಚೈತನ್ಯ ಶ್ರೀ– 2024" ಮಹಿಳಾ ಸಾಧಕಿ ಪ್ರಶಸ್ತಿಗೆ ಬಹುಮುಖ ಸಾಧಕಿ ಡಾ. ಅನುರಾಧಾ ಕುರುಂಜಿ ಆಯ್ಕೆ

ವೃತ್ತಿಯಲ್ಲಿ ಉಪನ್ಯಾಸಕಿಯಾಗಿದ್ದು ಪ್ರವೃತ್ತಿಯಲ್ಲಿ ತರಬೇತುದಾರಳು, ಸಂಘಟಕಿ ಹಾಗೂ ಬರಹಗಾರ್ತಿಯಾಗಿರುವ ಬಹುಮುಖ ಪ್ರತಿಭೆ ಸುಳ್ಯದ ಡಾ. ಅನುರಾಧಾ ಕುರುಂಜಿಯವರು ಕರ್ನಾಟಕ ರಾಜ್ಯ ವೈಜ್ಞಾನಿಕ ಪರಿಷತ್ತುನವರು ಅತ್ಯುತ್ತಮ ಸಾಧನೆಗೈದ ಮಹಿಳೆಯರಿಗೆ ಪ್ರಪ್ರಥಮ ಬಾರಿಗೆ ಕೊಡ ಮಾಡಿದ ರಾಜ್ಯಮಟ್ಟದ "ಪ್ರತಿಷ್ಠಿತ "ಚೈತನ್ಯ ಶ್ರೀ– 2024" ಪ್ರಶಸ್ತಿಗೆ ದಕ್ಷಿಣ ಕನ್ನಡ ಜಿಲ್ಲೆಯಿಂದ ಆಯ್ಕೆಯಾಗಿದ್ದಾರೆ. ಎನ್ ಎಸ್ ಎಸ್, ಸ್ಕೌಟ್– ಗೈಡ್, ಜೇಸೀಸ್, ರೆಡ್ ಕ್ರಾಸ್, ಮೊದಲಾದ ಸಂಸ್ಥೆಗಳಲ್ಲಿ ಹಲವು ಪ್ರಥಮಗಳೊಂದಿಗೆ ಕೆಲವು ಶಾಶ್ವತ ದಾಖಲೆಗಳನ್ನು ನಿರ್ಮಿಸಿರುವ ಡಾ. ಅನುರಾಧಾ ಕುರುಂಜಿಯವರು ಶಿಕ್ಷಣದ ಜೊತೆಗೆ ಓರ್ವ ವ್ಯಕ್ತಿತ್ವ ವಿಕಸನ ತರಬೇತುದಾರಳಾಗಿ 2500 ಕ್ಕೂ ಮಿಕ್ಕಿ ತರಬೇತಿಗಳನ್ನು. ನೀಡಿ ಸಾವಿರಾರು ವಿದ್ಯಾರ್ಥಿಗಳ, ಯುವಜನತೆಯ, ಸಮಾಜ ಬಾಂಧವರ ವ್ಯಕ್ತಿತ್ವ ವಿಕಸನಕ್ಕೆ ಕಾರಣಕರ್ತರಾದ ಇವರ ಶೈಕ್ಷಣಿಕ ಸೇವೆಯನ್ನು ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಬೆಂಗಳೂರಿನ ಯಲಹಂಕದ ವಿ ಜೆ ಇಂಟರ್ ನ್ಯಾಷನಲ್ ಶಾಲಾ ಮೈದಾನದಲ್ಲಿ ಇದೇ ಡಿ. 28 ಮತ್ತು 29 ರಂದು ನಡೆಯಲಿರುವ, ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಉದ್ಘಾಟಿಸಲಿರುವ, ರಂಗಕರ್ಮಿ, ಚಲನಾ ಚಿತ್ರನಟಿ ಉಮಾಶ್ರೀ ಸರ್ವಾಧ್ಯಕ್ಷರಾಗಿರುವ ರಾಜ್ಯ ಮಟ್ಟದ ನಾಲ್ಕನೇ ಬೃಹತ್ ವೈಜ್ಞಾನಿಕ ಸಮ್ಮೇಳನದಲ್ಲಿ, ಗಣ್ಯ ಅತಿಥಿಗಳ ಸಮ್ಮುಖದಲ್ಲಿ ಪ್ರಶಸ್ತಿ ಪ್ರಧಾನ ಸಮಾರಂಭ ನಡೆಯಲಿದೆ. ಈ ಹಿಂದೆ ಹಲವು ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಪ್ರಶಸ್ತಿಗಳಿಗೆ ಭಾಜನವಾಗಿರುವ ಡಾ ಅನುರಾಧಾ ಕುರುಂಜಿಯವರು ಕುರುಂಜಿಯ ಪದ್ಮಯ್ಯ ಗೌಡ, ಸೀತಮ್ಮ ದಂಪತಿಗಳ ಪುತ್ರಿ ಹಾಗೂ ಕೆವಿಜಿ ಪಾಲಿಟೆಕ್ನಿಕ್ ನ ಶಿಕ್ಷಕ ಚಂದ್ರಶೇಖರ ಬಿಳಿನೆಲೆಯವರ ಪತ್ನಿ.

ಕರ್ನಾಟಕ ಅರೆಭಾಷೆ ಅಕಾಡೆಮಿ ವತಿಯಿಂದ "ಅರೆಭಾಷೆ" ದಿನಾಚರಣೆ

ಭಾಷೆ ಬೆಳವಣಿಗೆ ಮತ್ತು ವಿಸ್ತರಣೆಗೆ ಸಹಕರಿಸಿದ ವಿವಿಧ ಕ್ಷೇತ್ರದ 6 ಮಂದಿ ಸಾಧಕರಿಗೆ ಸನ್ಮಾನ ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿಯ ಸ್ಥಾಪನಾ ದಿನದ ಅಂಗವಾಗಿ ಕರ್ನಾಟಕ ಅರೆಭಾಷೆ ಅಕಾಡೆಮಿಯ ಆಶ್ರಯದಲ್ಲಿ ಸುಳ್ಯ ತಾಲೂಕು ಗೌಡರ ಯುವ ಸೇವಾ ಸಂಘ, ಮಹಿಳಾ ಘಟಕ, ತರುಣ ನಗರ ಘಟಕ ಮತ್ತು ಮಹಿಳಾ ಸಮಿತಿಯ ಸಹಕಾರದಲ್ಲಿ ಸುಳ್ಯದ ಕೊಡಿಯಾಲಬೈಲು ಗೌಡ ಸಮುದಾಯ ಭವನದಲ್ಲಿ ಅರೆಭಾಷೆ ದಿನಾಚರಣೆ ಡಿ.15ರಂದು ನಡೆಯಿತು. ನಿವೃತ್ತ ಅರಣ್ಯ ಪಾಲಕ ಅಮೈ ಸುಂದರ ಗೌಡ ಪಿಂಗಾರ ಅರಳಿಸುವುದರ ಮೂಲಕ ಬೆಳಿಗ್ಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ವಿವಿಧ ತಂಡಗಳಿಂದ ಅರೆಭಾಷೆ ಹಾಡು, ನೃತ್ಯ ಪದರ್ಶನ, ರೂಪಕ, ಮಿಮಿಕ್ರಿ, ಪೊಳ್ಳೆ ಪದ್ಯ ಬಂಡಿ, ಸಾಂಪ್ರದಾಯಿಕ ಉಡುಗೆ ಪ್ರದರ್ಶನ ಮತ್ತಿತರ ಕಾರ್ಯಕ್ರಮಗಳು ನಡೆಯಿತು.ಸಭಾ ಕಾರ್ಯಕ್ರಮ– ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ ಬಳಿಕ ನಡೆದ ಸಭಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಸದಾನಂದ ಮಾವಜಿ ವಹಿಸಿದ್ದರು. ಹಿರಿಯ ಇಂಜಿನಿಯರ್ ಡಿ. ಎಂ.ಸುಮಿತ್ರ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಸುಳ್ಯ ತಾ.ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹಾಗೂ ಸಾಹಿತಿ ಶೈಲಜಾ ದಿನೇಶ್ ಅವರು ದಿಕ್ಕೂಚಿ ಭಾಷಣ ಮಾಡಿ, ನಮ್ಮ ಹೃದಯ ಭಾಷೆ ಅರೆಭಾಷೆ. ಹಾಗಾಗಿ ನಮ್ಮ ಭಾಷೆ ಮಾತನಾಡಲು ಎಲ್ಲಿಯೂ ಕೂಡ ನಾಚಿಕೆ ಕೀಳರಿಮೆ ಬೇಡ. ಮಕ್ಕಳೊಂದಿಗೆ ನಾವು ಸದಾ ಮನೆಯಲ್ಲಿ ನಮ್ಮ ಮಾತೃಭಾಷೆಯನ್ನು ಮಾತನಾಡಬೇಕು. ಜೊತೆಗೆ ಬಿಟ್ಟು ಹೋಗುತ್ತಿರುವ ಪದಗಳ ಬಳಕೆಯನ್ನು ಹೆಚ್ಚಾಗಿ ಭಾಷೆಯಲ್ಲಿ ಬಳಸಿಕೊಂಡು ಮಾತನಾಡಿದಾಗ ನಮ್ಮ ಹೃದಯದ ಭಾಷೆ ಮುಂದೆ ಹೋಗಲು ಸಾಧ್ಯ. ಇದರೊಂದಿಗೆ ಈಗಿನ ಕಂಪ್ಯೂಟರ್ ಯುಗದಲ್ಲಿ ನಮ್ಮ ಭಾಷೆಯನ್ನು ಹಾಗೂ ಭಾಷೆಯ ಮೇಲೆ ಆಸಕ್ತಿ ಇರುವವರನ್ನು ಜೊತೆಗೂಡಿಸಿಕೊಂಡು ಯುವ ಜನತೆಗೆ ವಾಟ್ಸ್ ಆಪ್ ಮಾಡಿಯಾಗುವಂತಹ ಕೆಲಸಗಳನ್ನು ಸೋಶಿಯಲ್ ಮೀಡಿಯ ಮೂಲಕ ಮಾಡಬೇಕು ಎಂದು ಅವರು ಅಭಿಪ್ರಾಯಪಟ್ಟರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸದಾನಂದ ಮಾವಜಿ ಮಾತನಾಡಿ ಅರೆಭಾಷೆ ಅಕಾಡೆಮಿ ಪ್ರಾರಂಭವಾಗಲು ಸುಳ್ಯದವರ ಶ್ರಮ ತುಂಬಾ ಇದೆ. ಈ ಹಿಂದೆ ಮಕ್ಕಳು ಅರೆಭಾಷೆ ಮಾತನಾಡಲು ಕಷ್ಟ ಪಡುತ್ತಿದ್ದರು ಆದರೆ ಈಗ ಎಲ್ಲವು ಬದಲಾಗಿದೆ. ಮಕ್ಕಳಿಗೆ ತಮ್ಮ ಭಾಷೆಯ ಮೇಲೆ ಗೌರವ ಬಂದಿದೆ. ಹಾಗೂ ಅರೆ ಭಾಷೆಯಲ್ಲಿ ಹೆಚ್ಚಿನ ಪದ್ಯಗಳು ರಚನೆಯಾಗಬೇಕು ಎಂದರು. ಇದರೊಂದಿಗೆ ಈ ದಿನ ಡಿ.15 ರಂದು ಅಕಾಡೆಮಿ ವತಿಯಿಂದ ಒಟ್ಟು 5ಕಡೆಗಳಲ್ಲಿ ಏಕಕಾಲದಲ್ಲಿ ಅರೆಭಾಷೆ ದಿನಾಚರಣೆ ನಡೆಯುತ್ತಿದೆ ಎಂದು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಗೌಡರ ಯುವ ಸೇವಾ ಸಂಘದ ಪೂರ್ವಾಧ್ಯಕ್ಷರಾದ ಕೆ.ಸಿ.ಸದಾನಂದ ಕುರುಂಜಿ, ಮೋಹನ್ ರಾಮ್ ಸುಳ್ಳಿ ಮುಖ್ಯ ಅತಿಥಿಗಳಾಗಿದ್ದರು. ಅರೆಭಾಷೆ ಬೆಳವಣಿಗೆಗೆ ಸಹಕರಿಸಿದ ಉದ್ಯಮಿ ಎಸ್.ಅಬ್ದುಲ್ಲ ಕಟ್ಟೆಕ್ಕಾರ್ಸ್, ಗಾಯಕ ಕೆ.ಆರ್.ಗೋಪಾಲಕೃಷ್ಣ, ಸುದ್ದಿ ಬಿಡುಗಡೆ ಸಂಪಾದಕ ಹರೀಶ್ ಬಂಟ್ವಾಳ್, ದೈವ ನರ್ತಕ ಜಯರಾಮ ಅಜಿಲ, ಗ್ರಂಥ ಪಾಲಕಿ ಸಾವಿತ್ರಿ ಕಣಿಮರಡ್ಕ, ಯುವ ಸಾಹಿತಿ ಉದಯಭಾಸ್ಕರ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ವೇದಿಕೆಯಲ್ಲಿ ಸುಳ್ಯ ತಾಲೂಕು ಗೌಡರ ಯುವ ಸೇವಾ ಸಂಘದ ಅಧ್ಯಕ್ಷ ಪಿ.ಎಸ್. ಗಂಗಾಧರ, ಅರೆಭಾಷೆ ಅಕಾಡೆಮಿ ಸದಸ್ಯರಾದ ಚಂದ್ರಶೇಖರ ಪೇರಾಲು, ಚಂದ್ರಾವತಿ ಬಡ್ಡಡ್ಕ, ಪಿ.ಎಸ್. ಕಾರ್ಯಪ್ಪ ಲತಾ ಪ್ರಸಾದ್ ಕುದ್ಪಾಜೆ, ಕಾರ್ಯಕ್ರಮದ ಸಂಘಟಕರಾದ ದಿನೇಶ್ ಮಡಪ್ಪಾಡಿ, ತಾಲೂಕು ಗೌಡ ಮಹಿಳಾ ಘಟಕದ ಅಧ್ಯಕ್ಷೆ ವಿನುತಾ ಪಾತಿಕಲ್ಲು, ಗೌಡ ನಗರ ಸಮಿತಿ ಅಧ್ಯಕ್ಷ ರಾಕೇಶ್ ಕುಂಠಿಕಾನ, ನಗರ ಮಹಿಳಾ ಸಮಿತಿ ಅಧ್ಯಕ್ಷೆ ಹರ್ಷ ಕರುಣಾಕರ, ತರುಣ ಘಟಕದ ಅಧ್ಯಕ್ಷ ಪ್ರೀತಮ್ ಡಿ.ಕೆ.ವೇದಿಕೆಯಲ್ಲಿದ್ದರು. ಅಕಾಡೆಮಿ ಸದಸ್ಯೆ, ಸಂಚಾಲಕಿ ಲತಾ ಪ್ರಸಾದ್ ಕುದ್ಪಾಜೆ ಸ್ವಾಗತಿಸಿ, ಕಾರ್ಯದರ್ಶಿ ತೀರ್ಥರಾಮ ಅಡ್ಕಬಳೆ ಧನ್ಯವಾದಗೈದರು. ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕ ಶಶಿಧರ ಎಂ.ಜೆ. ಹಾಗೂ ಶಿಕ್ಷಕಿ ಚಂದ್ರಮತಿ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕಿ ಉಷಾ ಪೇರಾಲು ಸಹಕರಿಸಿದರು.

ರಾಯಲ್ ಫ್ರೆಂಡ್ಸ್ ಗೂನಡ್ಕ– ಮಹಾಸಭೆ

ಅಧ್ಯಕ್ಷರಾಗಿ ಸಾಜಿದ್ ಐ.ಜಿ, ಪ್ರಧಾನ ಕಾರ್ಯದರ್ಶಿಯಾಗಿ ಜಾಬಿ ಎಂ.ಬಿ. ಆಯ್ಕೆ. ರಾಯಲ್ ಫ್ರೆಂಡ್ಸ್ ಆರ್ಟ್ಸ್ ಅಂಡ್ ಸ್ಪೋರ್ಟ್ಸ್ ಕ್ಲಬ್ ಟ್ರಸ್ಟ್ (ರಿ) ಇದರ ವಾರ್ಷಿಕ ಮಹಾ ಸಭೆಯು ಗೂನಡ್ಕದ ಕಛೇರಿಯಲ್ಲಿ ಅಧ್ಯಕ್ಷರಾದ ಸಾಜಿದ್ ಐ.ಜಿ ಯವರ ಅಧ್ಯಕ್ಷತೆಯಲ್ಲಿ ನಡೆಯಿತು. ಸಭೆಯಲ್ಲಿ 2024–25 ನೆಯ ಸಾಲಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ಸಾಜಿದ್ ಐ. ಜಿ, ಪ್ರಧಾನ ಕಾರ್ಯದರ್ಶಿಯಾಗಿ ಜಾಬಿ ಎಂ. ಬಿ, ಕೋಶಾಧಿಕಾರಿಯಾಗಿ ಅಜರುದ್ದೀನ್ ಚೇರೂರು, ಉಪಾಧ್ಯಕ್ಷರಾಗಿ ಅಜೀಜ್ ಟಿ.ಬಿ ಕಾರ್ಯದರ್ಶಿಗಳಾಗಿ, ಉಬೈಸ್ ಟಿ. ಕೆ ನಶ್ವಾನ್ ರವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಸರ್ವ ಸದಸ್ಯರ ಅಭಿಪ್ರಾಯದ ಪ್ರಕಾರ ನಿವೃತ್ತ ಯೋಧ ಮುಝಾಫರ್ ರವರನ್ನು ಗೌರವಾಧ್ಯಕ್ಷರಾಗಿಯು, ಅಡ್ವಕೇಟ್ ರಶೀದ್ ರವರನ್ನು ಕಾನೂನು ಸಲಹೆಗಾರರಾಗಿಯು ನೇಮಿಸಲಾಯಿತು. ಸಮಿತಿ ಸದಸ್ಯರಾಗಿ ಹರ್ಷಿತ್ ಮುನ್ನ, ಸಿಹಾಬ್ ಇಕ್ಬಾಲ್ ಎಂ, ಸಲೀಂ ಸುಳ್ಯ ಕಾದರ್ ಮೊಟ್ಟೆಂಗಾರ್ ನಪ್ಪಾನ್, ಸಿದ್ದೀಕ್ ದೊಡ್ಡಡ್ಕ ಸಲಹಾ ಸಮಿತಿ ಸದಸ್ಯರಾಗಿ ನವೀನ್ ಕುಮಾರ್ ಜಿ ಜಿ ಅಸ್ರಫ್ ಟಲ್ಲಿ ಗ್ರಾಮ ಪಂಚಾಯತ್ ಸದಸ್ಯರಾದ ಅಬುಸಾಲಿ ಇವತ್ತು ಅವರನ್ನು ಆಯ್ಕೆ ಮಾಡಲಾಯಿತು.

ನಿರಂಜನ್ ಕಡ್ಲಾರುರವರ ಸಾಹಿತ್ಯದಲ್ಲಿ ರಚನೆಯಾದ "ಜಗನ್ಮಾತೆ ಕಾಳಿಕಾಂಬೆ" ಎಂಬ ಕನ್ನಡ ಭಕ್ತಿಗೀತೆ ಬಿಡುಗಡೆ

ಶಕ್ತಿರೂಪಿಣಿಯಾಗಿರತಕ್ಕಂತಹ ಶ್ರೀ ಕಾಳಿಕಾ ಮಾತೆಯ 'ಜಗನ್ಮಾತೆ ಕಾಳಿಕಾಂಬೆ' ಎಂಬ ಕನ್ನಡ ಭಕ್ತಿಗೀತೆಯು ಮಂಗಳೂರಿನಲ್ಲಿ ಬಿಡುಗಡೆಗೊಂಡಿತು. ಮಂಗಳೂರಿನ ಶ್ರೀ ಕಾಳಿಕಾಂಬ ವಿನಾಯಕ ದೇವಸ್ಥಾನದಲ್ಲಿ ವಿಶ್ವಕರ್ಮ ಕಲಾ ಪರಿಷತ್ ಹಮ್ಮಿಕೊಂಡ ವಿಶ್ವಕರ್ಮ ಕಲಾ ಸಿಂಚನ ಸಾಂಸ್ಕೃತಿಕ ವೇದಿಕೆಯ ಸಮಾರೋಪ ಸಮಾರಂಭದಲ್ಲಿ ಮಂಗಳೂರು ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕರಾದ ಶ್ರೀ ಕೆ ಕೆ ಆಚಾರ್ಯ, ಶ್ರೀ ವಿಶ್ವಕರ್ಮ ಕಲಾ ಪರಿಷತ್ತಿನ ಗೌರವಾಧ್ಯಕ್ಷರಾದ ಶ್ರೀ ಪಿ ಎನ್ ಆಚಾರ್ ಹಾಗೂ ಶ್ರೀ ವಿಶ್ವಕರ್ಮ ಕಲಾ ಪರಿಷತ್ತಿನ ಅಧ್ಯಕ್ಷರಾದ ಡಾಕ್ಟರ್ ಎಸ್ ಪಿ ಗುರುದಾಸ್ ರವರು ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ವಿಶ್ವಕರ್ಮ ಸಹಕಾರ ಬ್ಯಾಂಕ್ ಹಾಗೂ ಸಹಕಾರ ಅಧ್ಯಯನ ಮತ್ತು ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷರಾದ ಡಾ.ಎಸ್ ಆರ್ ಹರೀಶ್ ಆಚಾರ್ಯ, ಮಂಗಳೂರು ಮಹಾನಗರ ಪಾಲಿಕೆಯ ಸದಸ್ಯರಾದ ಶ್ರೀಮತಿ ವನಿತ ಪ್ರಸಾದ್ ಇವರು ಹಾಗೂ ಶ್ರೀ ಕಾಳಿಕಾಂಬ ವಿನಾಯಕ ದೇವಸ್ಥಾನ ಮಂಗಳೂರು ಇದರ ಮಾಜಿ ಆಡಳಿತ ಮೊಕ್ತೇಸರಾದ ಶ್ರೀ ನಾಗರಾಜ ಆಚಾರ್ಯ ಮಂಗಳ ದೇವಿ ಮುಂತಾದ ಗಣ್ಯರು ಉಪಸ್ಥಿತರಿದ್ದರು. ಈ ಭಕ್ತಿಗೀತೆಗೆ ನಿರಂಜನ್ ಕಡ್ಲಾರುರವರ ಸಾಹಿತ್ಯವಿದ್ದು, ಮಿಥುನ್ ರಾಜ್ ವಿದ್ಯಾ ಪುರ ರವರ ಸಂಗೀತ ನಿರ್ದೇಶನವಿದೆ. ಕಿಶೋರ್ ಪೆರ್ಲ ಮತ್ತು ಅಂಕಿತಾ ಆಚಾರ್ಯ ಕಡ್ಲಾರುರವರ ಸುಮಧುರ ಗಾಯನವಿದ್ದು. ಗಿರೀಶ್ ಆಚಾರ್ಯ ಬೈತಡ್ಕ ರವರ ಸಂಕಲನವಿದೆ. ಈ ಭಕ್ತಿ ಗೀತೆಯನ್ನು N A Times ಯೂಟ್ಯೂಬ್ ಚಾನೆಲ್ ನಲ್ಲಿ ನೋಡಬಹುದು.

ದೇವಚಳ್ಳ :– ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಸರಕಾರಿ ಶಾಲೆಗಳಿಗೆ ಬೆಂಚು ಡೆಸ್ಕ್ ಗಳ ವಿತರಣಾ ಕಾರ್ಯಕ್ರಮ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ ಸಿ ಟ್ರಸ್ಟ್ (ರಿ) ವತಿಯಿಂದ ದೇವಚಳ್ಳ ಗ್ರಾಮದ ಎಲಿಮಲೆಯ ಸರಕಾರಿ ಪ್ರೌಢ ಶಾಲೆಗೆ, ದೇವಚಳ್ಳ ದ. ಕ. ಜಿ. ಪ. ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ, ಗುತ್ತಿಗಾರು ಗ್ರಾಮದ ವಳಲಂಬೆಯ ದ. ಕ. ಜಿ. ಪ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ, ಗುತ್ತಿಗಾರು ಗ್ರಾಮದ ಪಿ. ಎಂ. ಮಾದರಿ ಸರಕಾರಿ ಹಿರಿಯ ಪ್ರಾಥಮಿಕ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ, ಗುತ್ತಿಗಾರು ಗ್ರಾಮದ ಪದ

ಮೊದಲನೇ ಪುಟದಿಂದ

ಬಜಪ್ಪಿಲ ಪುನರ್ ಪ್ರತಿಷ್ಠಾ ಬ್ರಹ್ಮಕಲಶೋತ್ಸವ

ವಹಿಸಲಿದ್ದಾರೆ. ವೇದಮೂರ್ತಿ ಬ್ರಹ್ಮಶ್ರೀ ಕುಂಟಾರು ರವೀಶ ತಂತ್ರಿಗಳು ಧಾರ್ಮಿಕ ಉಪನ್ಯಾಸ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಅಕಾಡೆಮಿ ಆಫ್ ಲಿಬರಲ್ ಎಜುಕೇಶನ್ ಅಧ್ಯಕ್ಷ ಡಾ. ಕೆ. ವಿ. ಚಿದಾನಂದ ಗೌಡ, ಸುಳ್ಯ ಚೆನ್ನಕೇಶವ ದೇವಸ್ಥಾನದ ಅನುವಂಶಿಕ ಆಡಳಿತ ಮೊಕ್ತೇಸರ ಡಾ. ಹರಪ್ರಸಾದ್, ತೊಡಿಕಾನ ಮಲ್ಲಿಕಾರ್ಜುನ ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಮಾಜಿ ಅಧ್ಯಕ್ಷ ಕಿಶೋರ್‌ಕುಮಾರ್ ಉಳುವಾರು, ಉಳ್ಳಾಕುಲು ದೈವಸ್ಥಾನ, ಮೇನಾಲ ಇದರ ಮೊಕ್ತೇಸರ ಗುಡ್ಡಪ್ಪ ರೈ ಮೇನಾಲ, ಶ್ರೀಪಾದ ಕನ್ಸಲ್‌ಟೆನ್ಸಿ ಇದರ ಸಿವಿಲ್ ಇಂಜಿನಿಯರ್ ಶ್ಯಾಮ್ ಪ್ರಸಾದ್ ಅಡ್ಡಂತಡ್ಕ ಭಾಗವಹಿಸಲಿದ್ದಾರೆ. ಬಜಪ್ಪಿಲ ಕ್ಷೇತ್ರದ ಜೀರ್ಣೋದ್ಧಾರ ಸಮಿತಿ ಪ್ರಧಾನ ಕಾರ್ಯದರ್ಶಿ ಶ್ರೀಹರಿ ಕುಕ್ಕುಡೇಲು ವೇದಿಕೆಯಲ್ಲಿ ಉಪಸ್ಥಿತರಿರಲಿದ್ದಾರೆ. ಡಿ. 22ರಂದು ಬೆಳಿಗ್ಗೆ ಗಣಪತಿಹೋಮ, ಬ್ರಹ್ಮಕಲಶಪೂಜೆ, ಬೆಳಿಗ್ಗೆ 10.23 ರ ಕುಂಭ ಲಗ್ನದ ಸುಮೂಹೂರ್ತದಲ್ಲಿ ಶ್ರೀ ದೈವಗಳ ಪ್ರತಿಷ್ಠೆ, ಬ್ರಹ್ಮಕಲಶಾಭಿಷೇಕ ನಡೆಯಲಿದೆ. ನಂತರ ಮಹಾಪೂಜೆ, ನಿತ್ಯನೈಮಿತ್ಯಾದಿಗಳ ನಿರ್ಣಯ ಹಾಗೂ ಪ್ರಸಾದ ವಿತರಣೆ, ಅನ್ನ ಸಂತರ್ಪಣೆ ನಡೆಯಲಿದೆ. ಅಂದು ಸಂಜೆ ನಡೆಯುವ ಸಭಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಕ್ಷೇತ್ರದ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಹರಿಪ್ರಸಾದ್ ಬಾಳೆಕೋಡಿ ವಹಿಸಲಿದ್ದಾರೆ. ಗೌರವ ಉಪಸ್ಥಿತರಾಗಿ ಅಕಾಡೆಮಿ ಆಫ್ ಲಿಬರಲ್ ಎಜ್ಯುಕೇಶನ್ (ರಿ.) ಕಮಿಟಿ ಬಿ ಇದರ ಚಯರ್‌ಮೆನ್ ಡಾ. ಕೆ. ವಿ. ರೇಣುಕಾಪ್ರಸಾದ್, ಕರ್ಲಪ್ಪಾಡಿ ಶ್ರೀ ಶಾಸ್ತಾವೇಶ್ವರ ದೇವಸ್ಥಾನದ ಮೊಕ್ತೇಸರ ಮುದ್ದಪ್ಪ ಗೌಡ ಕುಡೆಂಬಿ, ಅಜ್ಜಾವರದ ಮಹಿಷಮರ್ಧಿನಿ ದೇವಸ್ಥಾನದ ಧರ್ಮದರ್ಶಿ ಬಯಂಬು ಭಾಸ್ಕರ ರಾವ್, ಕಾನತ್ತಿಲ ಉಳ್ಳಾಕುಲು ದೈವಸ್ಥಾನದ ಮೊಕ್ತೇಸರ ಹೇಮನಾಥ್ ಕೆ. ವಿ., ಅಂಬ್ರೋಟಿ ಹದಿನಾರು ಊರ ಗೌಡ ಲಕ್ಷಣ ಗೌಡ ಕುಕ್ಕೇಟಿ, ಅತ್ಯಾಡಿ ಉಳ್ಳಾಕುಲು ದೈವಸ್ಥಾನದ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಲೋಕಯ್ಯ ಮಾಸ್ಟರ್, ನಾರಾಲು ಉಳ್ಳಾಕುಲು ಚಾವಡಿ ಮೋನಪ್ಪ ಗೌಡ ನಾರಾಲು, ಮುಳ್ಯ ಹತ್ತೊಕ್ಕಲಿನ ಮುಖ್ಯಸ್ಥ ಹೊನ್ನಪ್ಪ ಗೌಡ

ಸತ್ಯಪಾಲ

ಅಜ್ಜಾವರದಲ್ಲಿ ನಿರ್ಮಾಣಗೊಂಡ ದ್ವಾರ

ಬೃಹತ್ ಚಪ್ಪರ ನಿರ್ಮಾಣ

ನೂತನವಾಗಿ ನಿರ್ಮಾಣಗೊಂಡ ದೈವಸ್ಥಾನ

ದೊಡ್ಡ ಮನೆ, ಕುಕ್ಕಂದೂರು ಕಿನ್ನಿಮಾನಿ ಪೂಮಾನಿ ದೈವಸ್ಥಾನದ ಮೊಕ್ತೇಸರ ಎನ್. ಎಸ್. ಬಾಲಕೃಷ್ಣ ಗೌಡ ನಡುಬೆಟ್ಟು, ಸುಳ್ಯದ ಪನ್ನೆಬೀಡು ಶ್ರೀ ಭಗವತೀ ಕ್ಷೇತ್ರದ ಬಲ್ಲಾಳರ ಪ್ರತಿನಿಧಿ ಬೂಡು ರಾಧಾಕೃಷ್ಣ ರೈ, ಸುಳ್ಯದ ಕಲ್ಕುಡ ದೈವಸ್ಥಾನದ ಉಮೇಶ್ ಪಿ.ಕೆ. ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ವೇದಿಕೆಯಲ್ಲಿ ಬಜಪ್ಪಿಲ ಕ್ಷೇತ್ರದ ಆಡಳಿತ ಸಮಿತಿ ಕಾರ್ಯದರ್ಶಿ ಪ್ರಮೀಣ್ ಬಾಳೆಕೋಡಿ ಉಪಸ್ಥಿತರಿರಲಿದ್ದಾರೆ. ಸಾಂಸ್ಕೃತಿಕ ಕಾರ್ಯಕ್ರಮ : ಡಿ. 21 ಶನಿವಾರ ಸಂಜೆ ಗಂಟೆ 4–00ರಿಂದ ಸ್ಥಳೀಯರಿಂದ ಸಾಂಸ್ಕೃತಿಕ ಸೌರಭ, ರಾತ್ರಿ ಗಂಟೆ 9–00ರಿಂದ ಡ್ಯಾನ್ಸ್ ಬೀಟ್ಸ್ ಜೀವನ್ ಟಿ. ಎನ್. ಬೆಳ್ಳಾರೆ ಇವರ ನಿರ್ದೇಶನ ತಂಡದಿಂದ "ನೃತ್ಯ ಸಂಭ್ರಮ" ಪ್ರದರ್ಶನಗೊಳ್ಳಲಿದೆ. ಡಿ.22 ರಂದು ಆದಿತ್ಯವಾರ ಸಂಜೆ ಗಂಟೆ 4–00ರಿಂದ ಸ್ಥಳೀಯರಿಂದ ಸಾಂಸ್ಕೃತಿಕ ಸೌರಭ, ಅಮ್ಮ ಕಲಾವಿದೆರ್ ಕುಡ್ಲ ಇವರಿಂದ ರಾತ್ರಿ ಗಂಟೆ 9–00ರಿಂದ ತುಳು ಹಾಸ್ಯಮಯ ನಾಟಕ "ಅಮ್ಮೆರ್" ಪ್ರದರ್ಶನಗೊಳ್ಳಲಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಹರಿಪ್ರಸಾದ್ ಬಾಳೆಕೋಡಿ,ಜೀರ್ಣೋದ್ಧಾರ ಸಮಿತಿ ಪ್ರ.ಕಾರ್ಯದರ್ಶಿ ಶ್ರೀಹರಿ ಕುಕ್ಕುಡೇಲು, ಜೀರ್ಣೋದ್ಧಾರ ಸಮಿತಿ ಕೋಶಾಧಿಕಾರಿ ತೀರ್ಥೇಶ್ ಬಲಂದೋಟಿ, ಆಡಳಿತ ಸಮಿತಿ ಕಾರ್ಯದರ್ಶಿ ಪ್ರಮೀಣ್ ಕುಮಾರ್ ಬಾಳೆಕೋಡಿ, ಜೀರ್ಣೋದ್ಧಾರ ಸಮಿತಿಯ ಕಾರ್ಯದರ್ಶಿಗಳಾದ ಮಂಜುನಾಥ ಪಿ. ಪೇರಾಲು, ದಾಮೋದರ ಮಿತ್ತಪೇರಾಲು, ರಾಜಣ್ಣ ಪೇರಾಲುಮೂಲೆ,ಸ್ವಾಗತ ಸಮಿತಿ ಸಂಚಾಲಕ ಜಯರಾಮ ಗೌಡರಮನೆ ಉಪಸ್ಥಿತರಿದ್ದರು.

ದೈವಸ್ಥಾನದ ಧ್ವಜಸ್ಥಂಭ

ರಂಗಮನೆಯಲ್ಲಿ ನೀನಾಸಂ ನಾಟಕೋತ್ಸವ

ಕಾಣಿಸಿಕೊಳ್ಳಲಿದ್ದಾರೆ. ಯಾವುದೇ ಸಭಾ ಕಾರ್ಯಕ್ರಮ ಇಲ್ಲದೆ ನಾಟಕವು ಸಮಯಕ್ಕೆ ಸರಿಯಾಗಿ ಆರಂಭವಾಗಲಿದ್ದು ಪ್ರವೇಶ ಉಚಿತವಾಗಿರುತ್ತದೆ ಎಂದು ರಂಗಮನೆಯ ಅಧ್ಯಕ್ಷರಾದ ಡಾ। ಜೀವನ್ ರಾಂ ಸುಳ್ಯ ತಿಳಿಸಿದ್ದಾರೆ.

ಶ್ರೀ ಚೆನ್ನಕೇಶವ ದೇವಸ್ಥಾನಕ್ಕೆ ನೂತನ ಬ್ರಹ್ಮರಥ ಸಮರ್ಪಣೆ

ಜ.2ರಂದು ಸುಳ್ಯದಲ್ಲಿ ರಥದ ಭೂಸ್ಪರ್ಶ ನಡೆಯಲಿದೆ. ಎಂದು ಕೆ.ವಿ.ಜಿ. ಆಯುರ್ವೇದ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲರಾದ ಡಾ. ಲೀಲಾಧರ್ ಡಿ.ವಿ. ಯವರು ಮಾಹಿತಿ ನೀಡಿದರು. ಬ್ರಹ್ಮರಥ ಸಮರ್ಪಣೆಯ ಸಿದ್ಧತೆಗಾಗಿ ಸಮಿತಿಯನ್ನು ಮಾಡಲಾಗಿದ್ದು ಸಮಿತಿಯ ಗೌರವಾಧ್ಯಕ್ಷರಾಗಿ ಸುಳ್ಯದ ಹಿರಿಯ ಉದ್ಯಮಿ ಕೃಷ್ಣ ಕಾಮತ್ ಹಾಗೂ ಅಧ್ಯಕ್ಷರಾಗಿ ನಾರಾಯಣ ಕೇಕಡ್ಕರನ್ನು ಆಯ್ಕೆ ಮಾಡಲಾಯಿತು. ಪ್ರಧಾನ ಕಾರ್ಯದರ್ಶಿಯಾಗಿ ಡಾ.ಲೀಲಾಧರ್ ಡಿ.ವಿ, ಉಪಾಧ್ಯಕ್ಷರಾಗಿ ಕೆ.ವಿ.ಹೇಮನಾಥ ಕುರುಂಜಿಯವರನ್ನು ಆಯ್ಕೆ ಮಾಡಲಾಯಿತು. ಸಭೆಯ ನೇತೃತ್ವ ವಹಿಸಿದ್ದ ಜೀರ್ಣೋದ್ಧಾ ಸಮಿತಿ ಅಧ್ಯಕ್ಷ ಡಾ.ಕೆ.ವಿ.ಚಿದಾನಂದರವರು ಮಾತನಾಡಿ ಸುಳ್ಯ ಶ್ರೀ ಚೆನ್ನಕೇಶವ ದೇವಸ್ಥಾನಕ್ಕೆ ನೂತನ ಬ್ರಹ್ಮರಥದ ಆಗಮನವಾಗಲಿದೆ.ಡಿ.23ರಂದು ರಥಕ್ಕೆ ಪೂಜೆ ನಡೆದು ಡಿ.31 ರಂದು ದೇವರಿಗೆ ಸಮರ್ಪಣೆ ನಡೆಯಲಿದೆ. ಜ.2ರಂದು ಭೂಸ್ಪರ್ಶವಾಗಲಿದೆ ಈ ಕಾರ್ಯಕ್ರಮಕ್ಕೆ ಎಲ್ಲರೂ ಆಗಮಿಸಿ ಯಶಸ್ವಿಗೊಳಿಸಬೇಕೆಂದರು. ದೇವಸ್ಥಾನ ಅನುವಂಶಿಕ ಆಡಳಿತ ಮೊಕೇಸರ ಡಾ.ಹರಪ್ರಸಾದ್ ತುದಿಯಡ್ಕರವರು ಮಾತನಾಡಿ ಜನವರಿ ತಿಂಗಳಲ್ಲಿ ನಡೆಯುವ ಬ್ರಹ್ಮರಥ ಸಮರ್ಪಣೆ ಹಾಗೂ ದೈವ ದೇವರುಗಳ ಜಾತ್ರೋತ್ಸವ ವಿಜೃಂಭಣೆಯಿಂದ ನಡೆಯಲಿದ್ದು ಬ್ರಹ್ಮರಥೋತ್ಸವವನ್ನು ಎಲ್ಲರೂ ಕಣ್ತುಂಬಿಕೊಳ್ಳಬೇಕು ಎಂದು ಹೇಳಿದರು. ಶಾಸಕಿ ಭಾಗೀರಥಿ ಮುರುಳ್ಯರವರು ಮಾತನಾಡಿ ಸುಳ್ಯ ಚೆನ್ನಕೇಶವ ದೇವಸ್ಥಾನಕ್ಕೆ ನೂತನ ಬ್ರಹ್ಮರಥ ಸಮರ್ಪಣೆಯಾಗಲಿದ್ದು ಎಲ್ಲರೂ ಕೈ ಜೋಡಿಸಿ ಯಶಸ್ವಿಗೊಳಿಸಬೇಕು ಎಂದು ಹೇಳಿದರು. ವೇದಿಕೆಯಲ್ಲಿ ದೇವಸ್ಥಾನದ ಜೀರ್ಣೋದ್ಧಾರ ಸಮಿತಿ ಸದಸ್ಯರಾದ ಎಂ.ಮೀನಾಕ್ಷಿ ಗೌಡ,ಎನ್.ಜಯಪ್ರಕಾಶ್ ರೈ, ನಗರ ಪಂಚಾಯತ್ ಅಧ್ಯಕ್ಷೆ ಶ್ರೀಮತಿ ಶಶಿಕಲಾ ನೀರಬಿದಿರೆ, ಸದಸ್ಯೆ ಶ್ರೀಮತಿ ಕಿಶೋರಿ ಶೇಟ್, ಎಸ್.ಐ.ಸಂತೋಷ್, ಮಧೂರು ದೇವಸ್ಥಾನದ ಮುರಳೀಧರ್ ಉಪಸ್ಥಿತರಿದ್ದರು. ಕೃಪಾಶಂಕರ ತುದಿಯಡ್ಕ ಸ್ವಾಗತಿಸಿ, ಹರ್ಷ ಕರುಣಾಕರ ಪ್ರಾರ್ಥಿಸಿ, ಚಂದ್ರಶೇಖರ ಪೇರಾಲು ಕಾರ್ಯಕ್ರಮ ನಿರೂಪಿಸಿದರು.

"ನಿನಾದ" ಸಾಂಸ್ಕೃತಿಕ ಕೇಂದ್ರ ತಂಟೆಪ್ಪಾಡಿ ವತಿಯಿಂದ ಡಾ. ಪುರುಷೋತ್ತಮ ಬಿಳಿಮಲೆಯವರ ಕೃತಿ " ಹುಡುಕಾಟ " ಅನಾವರಣ

ನಿನಾದ ಸಾಂಸ್ಕೃತಿಕ ಕೇಂದ್ರ ತಂಟೆಪ್ಪಾಡಿ ಇದರ ಆಶ್ರಯದಲ್ಲಿ ಕ. ಸಾ. ಪ ಸುಳ್ಯ ತಾಲೂಕು ಘಟಕ, ಪ್ರೆಸ್ ಕ್ಲಬ್ ಸುಳ್ಯ,ಮತ್ತು ಕಳಂಜ ಯುವಕ ಮಂಡಲ ಸಹಯೋಗದಲ್ಲಿ ನಡೆದ ಡಾಟ ಪುರುಷೋತ್ತಮ ಬಿಳಿಮಲೆಯವರ ಕೃತಿ "ಹುಡುಕಾಟ " ಅನಾವರಣ ಹಾಗೂ ಸಂವಾದ ಕಾರ್ಯಕ್ರಮವು ತಂಟೆಪ್ಪಾಡಿಯ ಪ್ರಶಾಂತ ಪರಿಸರದ ಸುಂದರ "ನಿನಾದ" ಕೇಂದ್ರದ ವೇದಿಕೆಯಲ್ಲಿ ಡಿ 7 ರಂದು ನೆರವೇರಿತು. ವೇದಿಕೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಡಾಟ ಬಿಳಿಮಲೆಯವರು ನಡೆದ ಸಂವಾದ ಕಾರ್ಯಕ್ರಮದಲ್ಲಿ ಆಗಮಿಸಿದ ಗಣ್ಯ ವ್ಯಕ್ತಿಗಳೊಂದಿಗೆ ತಮ್ಮ ಕಾರ್ಯ ಕ್ಷೇತ್ರದ ಹಾಗೂ ಕನ್ನಡ ಭಾಷೆ ನಾಡು, ನುಡಿ, ಜಲ, ಇತಿಹಾಸ, ಪುರಾಣ ಹಾಗೂ ಸಂಪ್ರದಾಯಗಳ ಬಗ್ಗೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು ಹಾಗೂ ಪ್ರಶ್ನೆ ಗಳಿಗೆ ಸಮಂಜಸ ವಾದ ಉತ್ತರ

ನೀಡಿದರು. ಸಭೆಯ ಅಧ್ಯಕ್ಷತೆಯನ್ನು "ನಿನಾದ" ಕೇಂದ್ರದ ಅಧ್ಯಕ್ಷ ಪಿ ಐತ್ತಪ್ಪ ಶೆಟ್ಟಿ ವಹಿಸಿಕೊಂಡಿದ್ದರು ಈ ಕಾರ್ಯಕ್ರಮದ್ದಲ್ಲಿ ಮುಖ್ಯ ಅತಿಥಿಗಳಾಗಿ ವೇದಿಕೆಯಲ್ಲಿ ಬೆಂಗಳೂರಿನ ಚಿರಂತ್" ಪ್ರಕಾಶನದ ಪರಮೇಶ್ವರ್ ಹೆಚ್, ಕ. ಸಾ. ಪ ಸುಳ್ಯ ಘಟಕದ ಅಧ್ಯಕ್ಷ ಚಂದ್ರಶೇಖರ ಪೇರಾಲು ಸುಳ್ಯ ಪ್ರೆಸ್ ಕ್ಲಬ್ ನ ಅಧ್ಯಕ್ಷ ಹರೀಶ್ ಬಂಟ್ವಾಳ, ಕಳಂಜ ಯುವಕ ಮಂಡಲದ ಅಧ್ಯಕ್ಷ ಗಂಗಾಧರ ತೋಟದ ಮೂಲೆ ಇದ್ದರು. ನಿನಾದ ಕೇಂದ್ರದ ರೂವಾರಿ ವಸಂತ ಶೆಟ್ಟಿಯವರು ತಮ್ಮ ಸ್ವಾಗತ ಭಾಷಣದ್ದಲ್ಲಿ ತಮ್ಮ ಹಾಗೂ ಬಿಳಿಮಲೆಯವರ ಹಲವು ವರ್ಷಗಳ ಸ್ನೇಹ ಸಂಬಂಧವನ್ನು ನೆನಪಿಸಿಕೊಂಡರು. ಕಾರ್ಯಕ್ರಮದ ನಿರೂಪಣೆ ಹರೀಶ್ ಬಂಟ್ವಾಳ ನಿರ್ವಹಿಸಿದರು, ಕೊನೆಯಲ್ಲಿ ನಿವೃತ್ತ ಪ್ರಾಂಶುಪಾಲ ರಾಮಕೃಷ್ಣ ಭಟ್ ಚೂರಿತಾರು ವಂದಿಸಿದರು ಈ ಸಂವಾದ ಕಾರ್ಯಕ್ರಮ ದ್ದಲಿ ಹಲವಾರು ಸಾಹಿತಿಗಳು, ವಿದ್ವಾಂಸರು, ಕವಿಗಳು, ಉದ್ಯಮಿಗಳು ಹಾಗೂ ಇನ್ನಿತ್ತರ ಗಣ್ಯರು ಆಗಮಿಸಿದ್ದರು

ಡಿ .29 ರಂದು ಕುಕ್ಕೆ ಸುಬ್ರಹ್ಮಣ್ಯದಲ್ಲಿ ರಾಜ್ಯಮಟ್ಟದ ಸಾಮೂಹಿಕ ಯೋಗ ಷಣ್ಮುಖ ನಮಸ್ಕಾರ

ಸುಬ್ರಹ್ಮಣ್ಯ : ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ತುಮಕೂರು ಹಾಗೂ ನೇತ್ರಾವತಿ ವಲಯ ಮಂಗಳೂರು ವತಿಯಿಂದ ಡಿಸೆಂಬರ್ 29ರಂದು ಕುಕ್ಕೆ ಶ್ರೀ ಸುಬ್ರಹ್ಮಣ್ಯ ಕ್ಷೇತ್ರದ ರಥ ಬೀದಿಯಲ್ಲಿ ರಾಜ್ಯಮಟ್ಟದ ಸಾಮೂಹಿಕ ಯೋಗ

ಷಣ್ಮುಖ ನಮಸ್ಕಾರ ನಡೆಯಲಿರುವುದು. ಈ ಯೋಗ ಶಿಬಿರದಲ್ಲಿ ರಾಜ್ಯಾದ್ಯಂತ ಸುಮಾರು 3000 ಯೋಗಾಸಕ್ತರು ಭಾಗವಹಿಸಲಿರುವರೆಂದು ಸಂಘಟಕರು ತಿಳಿಸಿರುತ್ತಾರೆ.

ಸುಬ್ರಹ್ಮಣ್ಯ ರೋಟರಿ ಕ್ಲಬ್ ವತಿಯಿಂದ ಸಂಪ್ಯಾಡಿ ಶಾಲಾ ಮಕ್ಕಳಿಗೆ ಸಮವಸ್ತ್ರ ವಿತರಣೆ

ಸುಬ್ರಹ್ಮಣ್ಯ ಡಿ.9: ಸುಬ್ರಹ್ಮಣ್ಯ ರೋಟರಿ ಕ್ಲಬ್ ವತಿಯಿಂದ ಬಳ್ಳ ಸಮೀಪದ ಸಂಪ್ಯಾಡಿ ಸರಕಾರಿ ಕಿರಿಯ ಪ್ರಾಥಮಿಕ ಶಾಲಾ ಎಲ್ಲಾ ವಿದ್ಯಾರ್ಥಿಗಳಿಗೆ ಸಮವಸ್ತ್ರವನ್ನು ಉಚಿತವಾಗಿ ವಿತರಿಸಲಾಯಿತು. ಸುಬ್ರಹ್ಮಣ್ಯ ರೋಟರಿ ಕ್ಲಬ್ ನ ಸದಸ್ಯ ಸಮೀರ್ ಬಳ್ಳ ಅವರು ಪ್ರಾಯೋಜಕತ್ವ ವಹಿಸಿದ್ದರು. ಸಮಾರಂಭದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಅಧ್ಯಕ್ಷ ಚಂದ್ರಶೇಖರ ನಾಯರ್ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶಾಲಾ ಅಭಿವೃದ್ಧಿ ಸಮಿತಿಯ ಅಧ್ಯಕ್ಷ ದೇವಿಪ್ರಸಾದ್ ಉಪಸ್ಥಿತರಿದ್ದರು. ವೇದಿಕೆಯಲ್ಲಿ ರೋಟರಿ ಕ್ಲಬ್ ಪೂರ್ವಾಧ್ಯಕ್ಷ ಗೋಪಾಲ ಎಣ್ಣೆಮಜಲು, ನಿರ್ದೇಶಕ ಸುದರ್ಶನ ಶೆಟ್ಟಿ, ಸಮವಸ್ತ್ರ ಪ್ರಯೋಜಕರಾದ ಸಮೀರ್ ಬಳ್ಳ, ಕಾರ್ಯದರ್ಶಿ ಚಿದಾನಂದ ಕುಳ ,ಶಾಲಾ ಮುಖ್ಯ ಶಿಕ್ಷಕಿ ವೇದಾವತಿ ,ಪೋಷಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಪೆರುವಾಜೆಯ ಅಕ್ಷತಾ ನಾಗನಕಜೆಯವ-ರಿಂದ ದಾಖಲೆ ಬರಹ - ಸನ್ಮಾನ

"ಕರ್ನಾಟಕ ಅಚೀವರ್ಸ್ ಬುಕ್ ಆಫ್ ರೆಕಾರ್ಡ್" ಕವಿಗಳಿಂದ ಸ್ಥಳದಲ್ಲಿಯೇ ದಾಖಲೆ ಬರಹ ಕಾರ್ಯಕ್ರಮದಲ್ಲಿ ಪೆರುವಾಜೆ ಗ್ರಾಮ ಪಂಚಾಯತ್ ನ ಅಕ್ಷತಾ ನಾಗನಕಜೆ ಅವರು ಜಾನಪದ ಕಲೆಯಾದ ಯಕ್ಷಗಾನ ಶೀರ್ಷಿಕೆ ಯಡಿಯಲ್ಲಿ 10 ನಿಮಿಷ 20 ಸೆಕೆಂಡ್ ನಲ್ಲಿ ಬರೆದು ರೆಕಾರ್ಡ್ ದಾಖಲೆ ಬರೆದಿದ್ದಾರೆ. ರಾಜ್ಯ ಕರುನಾಡ ಹಣತೆ ಕವಿ ಬಳಗ (ರಿ) ಚಿತ್ರದುರ್ಗ ಆಯೋಜಿಸಿರುವ ಪ್ರಥಮ ಜಾನಪದ ವಾರ್ಷಿಕೋತ್ಸವ ಕಾರ್ಯಕ್ರಮ 2024 ಚಿತ್ರದುರ್ಗ ದಲ್ಲಿ ದೆಹಲಿಯ "ಕರ್ನಾಟಕ ಅಚಿವರ್ಸ್ ಬುಕ್ ಆಫ್ ರೆಕಾರ್ಡ್ ಸಂಸ್ಥೆ" ಯವರು ಭಾಗವಹಿಸಿ ದಾಖಲೆ ಬರೆದ ಇವರಿಗೆ ಪ್ರಮಾಣ ಪತ್ರದ ಜೊತೆಗೆ ಶಾಲು ಹೊದಿಸಿ,ಫಲ,ಪುಷ್ಪ ಸ್ಮರಣಿಕೆ ನೀಡಿ ಸನ್ಮಾನಿಸಿದರು.

ದೊಡ್ಡೇರಿ ಶಾಲಾ ವಿದ್ಯಾರ್ಥಿಗಳಿಂದ ವಂದೇ ಭಾರತ್ ನಲ್ಲಿ ಶೈಕ್ಷಣಿಕ ಪ್ರವಾಸ

ದೊಡ್ಡೇರಿ ಸ.ಹಿ.ಪ್ರಾ. ಶಾಲಾ ವಿದ್ಯಾರ್ಥಿಗಳಿಂದ ವಂದೇ ಭಾರತ್ ನಲ್ಲಿ ಡಿ.06 ರಂದು ಶಾಲಾ ಶೈಕ್ಷಣಿಕ ಪ್ರವಾಸ ಹಮ್ಮಿಕೊಳ್ಳಲಾಯಿತು. ಮಂಗಳೂರಿನಿಂದ ಕೇರಳದ ಕಣ್ಣೂರಿಗೆ ವಂದೇ ಭಾರತ್ ಎಕ್ಸ್ ಪ್ರೆಸ್ ರೈಲಿನಲ್ಲಿ ಶಾಲೆಯ ಪೋಷಕರು ಮತ್ತು ಮಕ್ಕಳೊಡನೆ ಒಂದು ದಿನದ ಪ್ರವಾಸ ಹಮ್ಮಿಕೊಳ್ಳಲಾಯಿತು. ಕಣ್ಣೂರು ಹಾಗೂ ಸುತ್ತಮುತ್ತಲಿನ ಪ್ರವಾಸಿ ತಾಣಗಳನ್ನು ವೀಕ್ಷಿಸಿ, ಸಾಯಂಕಾಲ ಕಣ್ಣೂರು–ಬೆಂಗಳೂರು ಎಕ್ಸ್ ಪ್ರೆಸ್ ರೈಲಿನಲ್ಲಿ ಹಿಂತಿರುಗಿದರು.

ಕೊಡಗು ಗೌಡ ಹುತ್ತರಿ ಕಪ್–2024 ಮುಡಿಗೇ–ರಿಸಿಕೊಂಡ ಪೆರಾಜೆಯ ಕುಂಬಳಚೇರಿ ಕುಟುಂಬ

ಭಾಗಮಂಡಲ ನಾಡು ಗೌಡ ಯುವ ಒಕ್ಕೂಟದ ವತಿಯಿಂದ ಆಯೋಜಿಸಿದ ಹತ್ತು ಕುಟುಂಬ ಹದಿನೆಂಟು ಗೋತ್ರದ ಗೌಡ ಕುಟುಂಬವಾರು ಹಗ್ಗ ಜಗ್ಗಾಟ ಪಂದ್ಯಾವಳಿಯ ಪ್ರಥಮ ವರ್ಷದ ಕೊಡಗು ಗೌಡ ಹುತ್ತರಿ ಕಪ್ – 2024 ಅನ್ನು ಪೆರಾಜೆಯ ಕುಂಬಳಚೇರಿ ಮನೆತನ ಪ್ರಶಸ್ತಿಯನ್ನು ತನ್ನ ಮುಡಿಗೇರಿಸಿಕೊಂಡಿತು ಭಾಗಮಂಡಲದ ಶ್ರೀ ಕಾವೇರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ನಡೆದ ಪುರುಷರ ಹಗ್ಗಜಗ್ಗಾಟ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಕುಂಬಳಚೇರಿ ಕುಟುಂಬ ತಂಡವು ಎದುರಾಳಿ

ಪರ್ಲಕೋಟಿ ಕುಟುಂಬವನ್ನು ಸೋಲಿಸಿ ಪ್ರಶಸ್ತಿ ತನ್ನದಾಗಿಸಿಕೊಂಡಿತು. ಹಗ್ಗ ಜಗ್ಗಾಟದ ರನ್ನರ್ ಅಪ್ ಪ್ರಶಸ್ತಿಯನ್ನು ಪರ್ಲಕೋಟಿ ಕುಟುಂಬ ತಂಡವು ಪಡೆದು ಕೊಂಡರೆ , ತೃತೀಯ ಹಾಗೂ ಚತುರ್ಥ ಸ್ಥಾನವನ್ನು ಪೆರಾಜೆಯ ನಿಡ್ಯಮಲೆ ಕುಟುಂಬ ಮತ್ತು ಮಜಿಕೋಡಿ ಕುಟುಂಬ ತಂಡ ಪಡೆದು ಕೊಂಡಿತು. ಮಹಿಳೆಯರ ಕುಟುಂಬವಾರು ಹಗ್ಗಜಗ್ಗಾಟ ಪಂದ್ಯದಲ್ಲಿ ದಾಯನ ಕುಟುಂಬ ತಂಡ ಪ್ರಥಮ ಸ್ಥಾನ ಗಳಿಸಿದರು. ದ್ವಿತೀಯ ಸ್ಥಾನವನ್ನು ಅಮೆಮನೆ ಕುಟುಂಬಸ್ಥರ ತಂಡ , ತೃತೀಯ ಹಾಗೂ ಚತುರ್ಥ ಕುದುಪಜೆ ಮತ್ತು ಪೊನ್ನೇಟಿ ಕುಟುಂಬ ತಂಡಗಳು ಪಡೆದುಕೊಂಡಿತು.

ಬಿಳಿನೆಲೆ ಕೈಕಂಬ ಶಾಲಾ ಮಕ್ಕಳಿಗೆ ಅನುಭವ ಮಂಟಪದ ಪಾಠ ಮಾಡಿದ ಸಿ.ಎಂ

ಸುಬ್ರಹ್ಮಣ್ಯ, ಡಿ.16: ಶಾಲಾ ಪ್ರವಾಸದ ಅಂಗವಾಗಿ ಬೆಳಗಾವಿ ಸುವರ್ಣಸೌಧಕ್ಕೆ ಭ

ಮೊಗ್ರ : ದೈವ ನರ್ತಕ ಗಿರಿಯಪ್ಪ ಅಜಿಲ ನಿಧನ

ಗುತ್ತಿಗಾರು ಗ್ರಾಮದ ಮೊಗ್ರ ನಿವಾಸಿ ಗಿರಿಯಪ್ಪ ಅಜಿಲರವರು ಹೃದಯಘಾತದಿಂದ ಡಿ. 12ರಂದು ರಾತ್ರಿ ನಿಧನರಾದರು. ಅವಿವಾಹಿತರಾಗಿದ್ದ ಅವರಿಗೆ 36 ವರ್ಷ ವಯಸ್ಸಾಗಿತ್ತು. ಆರೋಗ್ಯದಿಂದಿದ್ದ ಅವರು ರಾತ್ರಿ ಊಟ ಮುಗಿಸಿ ಮಲಗುವ ಹೊತ್ತಿಗೆ ಮನೆಯಲ್ಲಿ ಹೃದಯಘಾತವಾಯಿತೆನ್ನಲಾಗಿದೆ. ತಕ್ಷಣ ಅವರನ್ನು ಕಾಣಿಯೂರಿನ ಸರಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು. ಆದರೇ ಚಿಕಿತ್ಸೆ ಫಲಿಸದೇ ಮೃತಪಟ್ಟರೆಂದು ತಿಳಿದುಬಂದಿದೆ. ಮೊಗ್ರ ಶ್ರೀ ಕನ್ನಡ ದೇವತೆ ಯಾನೆ ಪುರುಷ ದೈವಸ್ಥಾನದಲ್ಲಿ ಬಂಟ ದೈವ, ಬೇಡವ ದೈವ ನರ್ತಕರಾಗಿ ಸೇವೆ ಸಲ್ಲಿಸುತ್ತಿದ್ದ ಅವರು ಊರಿನಲ್ಲಿಯೂ ದೈವ ನರ್ತಕರಾಗಿ ಪ್ರಸಿದ್ಧಿಯಾಗಿದ್ದರು. ಮೃತರು ತಂದೆ ದುಗ್ಗಣ್ಣ ಅಜಿಲ, ತಾಯಿ ಕುಸುಮಾವತಿ, ಸಹೋದರ ನೀಲಪ್ಪ, ಸಹೋದರಿ ನೀಲಾವತಿ, ಕುಟುಂಬಸ್ಥರು, ಬಂಧುಮಿತ್ರರನ್ನು ಅಗಲಿದ್ದಾರೆ.

ಕಲ್ಮಡ್ಕ: ಜ್ವರದಿಂದ ಮಹಿಳೆ ಮೃತ್ಯು

ಬೆಳ್ಳಾರೆ ಶ್ರೀ ದುರ್ಗಾ ಜ್ಯುವೆಲ್ಲರಿ ಮಾಲಕ, ಕಲ್ಮಡ್ಕ ಗ್ರಾಮದ ಮಾಳಿಗೆ ನಾರಾಯಣ ಆಚಾರ್ಯ ರವರ ಪತ್ನಿ ಶ್ರೀಮತಿ ಹರಿಣಾಕ್ಷಿ ಯವರು ಜ್ವರದಿಂದ ಮಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಡಿ.12 ರಂದು ನಿಧನರಾದರು. ಅವರಿಗೆ 44 ವರ್ಷ ವಯಸ್ಸಾಗಿತ್ತು. ಮೃತರು ಪತಿ, ಪುತ್ರ,ಮೂವರು ಪುತ್ರಿಯರು, ಮನೆಯವರು, ಕುಟುಂಬಸ್ಥರು ಹಾಗೂ ಬಂಧುಮಿತ್ರರನ್ನು ಅಗಲಿದ್ದಾರೆ.

ಬೋರುಗುಡ್ಡೆ ರಸ್ತೆಯಲ್ಲಿ ಕಾರು ಪಲ್ಟಿ

ಸುಳ್ಯ ಆಲೆಟ್ಟಿ ಸಂಪರ್ಕಿಸುವ ರಸ್ತೆಯಲ್ಲಿ ಗುಂಡಿ ತಪ್ಪಿಸುವ ಸಲುವಾಗಿ ಕಾರನ್ನು ಚಲಾವಣೆ ಮಾಡುವಾಗ ನಿಯಂತ್ರಣ ತಪ್ಪಿ ಕಾರೊಂದು ಪಲ್ಟಿಯಾದ ಘಟನೆ ಇದೀಗ ವರದಿಯಾಗಿದೆ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

ಮರ್ಕಂಜ : ಮಿನುಂಗೂರು ದೇವಸ್ಥಾನದ ಕಾಣಿಕೆ ಡಬ್ಬಿ ಒಡೆದ ಕಳ್ಳರು

ಮಿನುಂಗೂರು ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನದ ಕಾಣಿಕೆ ಡಬ್ಬಿಯನ್ನು ಒಡೆದು ಹಣ ಕಳವು ಮಾಡಿರುವ ಘಟನೆ ಇಂದು ಬೆಳಕಿಗೆ ಬಂದಿದೆ. ಮರ್ಕಂಜ ಗ್ರಾಮದ ಮಿನುಂಗೂರು ದೇವಸ್ಥಾನ ಜೀರ್ಣೋದ್ಧಾರ ಗೊಳ್ಳುತ್ತಿದ್ದು, ದೇವರನ್ನು ಬಾಲಾಲಯದಲ್ಲಿ ಪ್ರತಿಷ್ಠಾಪಿಸಲಾಗಿತ್ತು. ಹೊರಗಿನ ಆವರಣದಲ್ಲಿ ಕಾಣಿಕೆ ಡಬ್ಬಿಗಳನ್ನು ಇರಿಸಲಾಗಿತ್ತು. ಕಳೆದ ರಾತ್ರಿ ಕಳ್ಳರು ದೇವಸ್ಥಾನಕ್ಕೆ ಬಂದು ಕಾಣಿಕೆ ಡಬ್ಬಿಯನ್ನು ಒಡೆದು ಹಣ ದೋಚಿದ್ದಾರೆನ್ನಲಾಗಿದೆ. ಇಂದು ಬೆಳಗ್ಗೆ ದೇವಸ್ಥಾನಕ್ಕೆ ಬಂದು ಕಾಣಿಕೆ ಹಾಕುವ ಸಂದರ್ಭ ಹಣ ಕಳವಾದ ಘಟನೆ ಬೆಳಕಿಗೆ ಬಂದಿದೆ. ಇದೀಗ ಪೋಲೀಸರು ಸ್ಥಳಕ್ಕೆ ಆಗಮಿಸಿ ತನಿಖೆ ನಡೆಸುತ್ತಿದ್ದಾರೆ.

ಬಾಳುಗೋಡು : ಸೌದೆಗಾಗಿ ಕಾಡಿಗೆ ಹೋಗಿದ್ದ ವೇಳೆ ಕಾಡು ಹಂದಿ ದಾಳಿ – ಮಾವ ಹಾಗೂ ಸೊಸೆಗೆ ಗಾಯ

ಸೌದೆಗಾಗಿ ಕಾಡಿಗೆ ಹೋಗಿದ್ದ ಸಂದರ್ಭದಲ್ಲಿ ಮಾವ ಹಾಗೂ ಸೊಸೆಯ ಮೇಲೆ ಕಾಡು ಹಂದಿ ದಾಳಿ ನಡೆಸಿದ ಘಟನೆ ಬಾಳುಗೋಡು ಗ್ರಾಮದ ಕೊತ್ನಡ್ಕ ಎಂಬಲ್ಲಿ ವರದಿಯಾಗಿದ್ದು, ಕೊತ್ನಡ್ಕದ ಬಾಬು(ಮಾವ) ಹಾಗೂ ಹರಿಣಾಕ್ಷಿ(ಸೊಸೆ) ಎಂಬುವವರು ಮಧ್ಯಾಹ್ನ 3 ಗಂಟೆಯ ಸುಮಾರಿಗೆ ಸೌದೆ ತರಲು ಕಾಡಿಗೆ ಹೋಗಿದ್ದ ಸಂದರ್ಭದಲ್ಲಿ ಕಾಡು ಹಂದಿ ದಾಳಿ ನಡೆಸಿದೆ ಎಂದು ತಿಳಿದುಬಂದಿದೆ. ಘಟನೆಯಲ್ಲಿ ಮಹಿಳೆಯ ತೊಡೆ ಹಾಗೂ ಕಾಲಿಗೆ ಗಾಯವಾಗಿದ್ದು, ಬಾಬು ರವರ ಹೊಟ್ಟೆಗೆ ಗಾಯವಾಗಿದೆ ಎಂದು ತಿಳಿದುಬಂದಿದ್ದು, ಸುಳ್ಯ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ತೆರಳಿದ್ದಾರೆ ಎಂದು ತಿಳಿದುಬಂದಿದೆ.

ಸುಳ್ಯ: ಶಿವಕುಮಾರ್ ಹೊಸಗದ್ದೆ ನಿಧನ

ಸುಳ್ಯ ದ ಬೀರಮಂಗಲ ದಲ್ಲಿ ವಾಸವಾಗಿದ್ದ ಶಿವಕುಮಾರ್ ಹೊಸಗದ್ದೆ ಯವರನ್ನು ಅನಾರೋಗ್ಯದಿಂದ ಡಿ.06 ರಂದು ಸರಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ವೈದ್ಯರ ಸೂಚನೆಯಂತೆ ಹೆಚ್ಚಿನ ಚಿಕಿತ್ಸೆಗೆ ಕೆವಿಜಿ ಆಸ್ಪತ್ರೆ ಗೆ ದಾಖಲಿಸಿದರೂ ರಾತ್ರಿ ವೇಳೆಗೆ ತೀವ್ರ ಅಸ್ವಸ್ಥ ಗೊಂಡು ಕೊನೆ ಉಸಿರೆಳೆದಿರುತ್ತಾರೆ. 37 ವರ್ಷ ವಯಸಾಗಿದ್ದು ಮೃತರು ತಾಯಿ, ಪತ್ನಿ, ಸಹೋದರಿ ಮತ್ತು ಬಂದು ಮಿತ್ರರನ್ನು ಅಗಲಿರುತ್ತಾರೆ

ಹರೀಶ ಪಟ್ಟೆ ನಿಧನ

ಮರ್ಕಂಜ ಗ್ರಾಮದ ಪಟ್ಟೆ ಚಂದ್ರ ಪಾಟಾಳಿ ಎಂಬವರ ಪುತ್ರ ಹರೀಶ ಎಂಬವರು ನಿನ್ನೆ (ಡಿ.5) ನಿಧನರಾದರು. ಅವರಿಗೆ 37 ವರ್ಷ ವಯಸ್ಸಾಗಿತ್ತು.

ಹರೀಶರವರು ಮುಂಡೋಡಿ ಶ್ರೀ ಶಿರಾಡಿ ಯಾನೆ ರಾಜನ್ ದೈವದ ಎಣ್ಣೆ ಹಿಡಿಯುವ ಸೇವೆ ಮಾಡುತ್ತಿದ್ದರು. ಹಾಗೂ ಸುಳ್ಯದಲ್ಲಿ ಹೂವಿನ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದರು. ಮೃತರು ತಂದೆ ಮತ್ತು ತಾಯಿ ದೇವಕಿಯವರನ್ನು ಅಗಲಿದ್ದಾರೆ.

ಅರಂತೋಡು : ಮುರಿದು ಬೀಳುವ ಸ್ಥಿತಿಯಲ್ಲಿ ಗ್ರಾಮ ಆಡಳಿತಾಧಿಕಾರಿಗಳ ಕಛೇರಿ

ಅರಂತೋಡು ಗ್ರಾಮ ಆಡಳಿತಾಧಿಕಾರಿಗಳ ಕಛೇರಿ ಮುರಿದು ಬೀಳುವ ಹಂತಕ್ಕೆ ತಲುಪಿದೆ. ಕಟ್ಟಡ ಸಂಪೂರ್ಣ ಶಿಥಿಲಗೊಂಡಿದ್ದು, ಸಾರ್ವಜನಿಕರು ಹಾಗೂ ಸಿಬ್ಬಂದಿಗಳ ಮೇಲೆ ಮುರಿದು ಬೀಳುವ ಮುನ್ನ ತಾಲೂಕು ಆಡಳಿತ ಹಾಗೂ ಜನಪ್ರತಿನಿಧಿಗಳು ಎಚ್ಚೆತ್ತು ಈ ಬಗ್ಗೆ ಗಮನ ಹರಿಸುವಂತೆ ಜನತೆ ಒತ್ತಾಯಿಸಿದ್ದಾರೆ.

ಕಲ್ಮಕಾರು : ಆನೆ ದಾಳಿ – ಅಯ್ಯಪ್ಪ ವ್ರತಧಾರಿ ಗಂಭೀರ ಗಾಯ

ಕಲ್ಮಕಾರು ಗ್ರಾಮದಲ್ಲಿ ಕಾಡಾನೆ ದಾಳಿಗೆ ಅಯ್ಯಪ್ಪ ವ್ರತಧಾರಿ ಗಂಭೀರವಾಗಿ ಗಾಯಗೊಂಡ ಘಟನೆ ಡಿ. 17ರ ಮುಂಜಾನೆ ನಡೆದಿದೆ. ಗಾಯಗೊಂಡ ವ್ಯಕ್ತಿಯನ್ನು ಕಲ್ಮಕಾರು ಗ್ರಾಮದ ಚರಿತ್ ಎಂದು ಗುರುತಿಸಲಾಗಿದ್ದು, ಇಂದು ಮುಂಜಾನೆ ಹೊಳೆಯಲ್ಲಿ ಬಟ್ಟೆ ತೊಳೆಯುತ್ತಿದ್ದಾಗ ಆನೆ ದಾಳಿ ನಡೆದಿರುವುದಾಗಿ ತಿಳಿದುಬಂದಿದೆ. ಅಯ್ಯಪ್ಪ ವ್ರತಧಾರಿ ಚರಿತ್ ಗೆ ಗಂಭೀರ ಗಾಯಗಳಾಗಿದ್ದು, ಸುಳ್ಯದ ಆಸ್ಪತ್ರೆಗೆ ದಾಖಲಾಗಿ, ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಮಂಗಳೂರಿಗೆ ಕರೆದೊಯ್ಯಲಾಗಿದೆ ಎಂದು ತಿಳಿದು ಬಂದಿದೆ. ಘಟನಾ ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು, ಸ್ಥಳೀಯರು ದೌಡಾಯಿಸಿದ್ದಾರೆ.

ಸುಳ್ಯ ಆಟೋ ಚಾಲಕ ಅನಾರೋಗ್ಯದಿಂದ ಮೃತ್ಯು

ಸುಳ್ಯ ಆಟೋ ಚಾಲಕ ರಾಗಿದ್ದ ಮೇನಾಲದ ಪ್ರೇಮಚಂದ್ರ ರೈಎಂಬವರು ಅಲ್ಪ ಕಾಲದ ಅಸಂಖ್ಯ ದಿಂದ ಮಂಗಳೂರಿನ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೇ ಮೃತಪಟ್ಟಿರುವುದು ವರದಿಯಾಗಿದೆ . ಮೃತ ಚಂದ್ರಶೇಖರರು ಪತ್ನಿ ಓರ್ವ ಪುತ್ರಿ ಹಾಗೂ ಅಪಾರ ಬಂದು ಮಿತ್ರರರನ್ನು ಅಗಲಿದ್ದಾರೆ

ಕಾರ್ಮಿಕ ಮುಖಂಡ ಕೆ.ಪಿ. ಜಾನಿಯವರಿಗೆ ಪತ್ನಿ ವಿಯೋಗ

ಕಾರ್ಮಿಕ ಮುಖಂಡ ಕೆ. ಪಿ. ಜಾನಿ ಅವರ ಪತ್ನಿ ಶ್ರೀಮತಿ ಸಿನಿ ಜಾನ್ ರವರು ಮಂಗಳೂರಿನ ಆಸ್ಪತ್ರೆಯಲ್ಲಿ ಇಂದು ನಿಧನರಾದರು.

ಅವರಿಗೆ 40 ವರ್ಷ ವಯಸ್ಸಾಗಿತ್ತು. ಮೃತರು ಇಬ್ಬರು ಪುತ್ರಿಯರು, ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಅರಂತೋಡು : ಅಟೋ ರಿಕ್ಷಾ ಪಲ್ಟಿ – ಪ್ರಯಾಣಿಕರಿಗೆ ಗಾಯ

ಕಾರ್ಮಿಕ ಮುಖಂಡ ಕೆ. ಪಿ. ಜಾನಿ ಅವರ ಪತ್ನಿ ಶ್ರೀಮತಿ ಸಿನಿ ಜಾನ್ ರವರು ಮಂಗಳೂರಿನ ಆಸ್ಪತ್ರೆಯಲ್ಲಿ ಇಂದು ನಿಧನರಾದರು. ಅವರಿಗೆ 40 ವರ್ಷ ವಯಸ್ಸಾಗಿತ್ತು. ಮೃತರು ಇಬ್ಬರು ಪುತ್ರಿಯರು, ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಕಲ್ಲುಗುಂಡಿ : ಚಾಲಕನ ನಿಯಂತ್ರಣ ತಪ್ಪಿ ಕಾರು ಪಲ್ಟಿ, ಕಾರು ಜಖಂ

ಚಾಲಕನ ನಿಯಂತ್ರಣ ತಪ್ಪಿ ಕಾರೊಂದು ಪಲ್ಟಿಯಾದ ಘಟನೆ ಕಲ್ಲುಗುಂಡಿಯ ಮೇಲಿನ ಪೇಟೆಯಲ್ಲಿ ಡಿ 19 ರಂದು ನಡೆದಿದೆ. ಸುಳ್ಯದಿಂದ ಮಡಿಕೇರಿ ಕಡೆ ಹೋಗುತ್ತಿದ್ದ ಏಂ –6 ಜ 9844 ಟ್ಯಾಕ್ಸಿ ಕಾರು ಚಾಲಕನ ನಿಯಂತ್ರಣ ತಪ್ಪಿ ಕಲ್ಲುಗುಂಡಿಯ ಮೇಲಿನ ಪೇಟೆಯ ಎಣ್ಣೆ ಮಿಲ್ಲಿನ ಸಮೀಪದ ಮರಕ್ಕೆ ಗುದ್ದಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ತಿಳಿದುಬಂದಿದೆ. ಕಾರಿನ ಮುಂಭಾಗ ಕಖಂಗೊಂಡಿದೆ ಎಂದು ತಿಳಿದು ಬಂದಿದೆ.

ಗಂಗಾಧರ ಬೆಳ್ಚಪ್ಪಾಡ ದೇವ ಕನ್ನಡಕಜೆ ನಿಧನ

ದೇವಚಳ್ಳ ಗ್ರಾಮದ ದೇವ ಕನ್ನಡಕಜೆ ಗಂಗಾಧರ ಬೆಳ್ಚಪ್ಪಾಡ (63) ಅಲ್ಪಕಾಲದ ಅಸೌಖ್ಯದಿಂದ ಡಿ.15 ರಂದು ಸ್ವಗೃಹದಲ್ಲಿ ನಿಧನರಾದರು

ಮೃತರು ನಾಟಿವೈದ್ಯೆ ಶ್ರೀಮತಿ ಸೀತಾರತ್ನ, ಪುತ್ರ ರಕ್ಷಿತ್, ಪುತ್ರಿ ಶ್ರೀಮತಿ ವಿದ್ಯಾ ರನ್ನು ಅಗಲಿದ್ದಾರೆ.

ಸೂರಿಕುಮೇರಿನಲ್ಲಿ ಬೈಕ್ ಮತ್ತು ಟೆಂಪೊ ನಡುವೆ ಅಪಘಾತ ಹಿಂದು ಪರ ಸಂಘಟನೆಯ ಕಾರ್ಯಕರ್ತ ಮೃತ್ಯು

ಅಮರಮುನ್ನೂರು ಗ್ರಾಮದ ಮರ್ಗಿಲಡ್ಕ ನಿವಾಸಿ ಪುನೀತ್(30) ರವರು ಸೂರಿಕುಮೇರು ಎಂಬಲ್ಲಿ ನಿನ್ನೆ ತಡರಾತ್ರಿ ಸಂಭವಿಸಿದ ಭೀಕರ ಅಪಘಾತದಲ್ಲಿ ಮೃತಪಟ್ಟಿರುತ್ತಾರೆ. ಮಂಗಳೂರಿನಲ್ಲಿ ಕೋಸ್ಟಲ್ ಕೋಳಿ ಫಾರ್ಮ್ ನಲ್ಲಿ ಚಾಲಕರಾಗಿದ್ದ ಅವರು ಕೆಲಸ ಮುಗಿಸಿ ಮನೆಗೆ ಹಿಂತಿರುಗುವ ವೇಳೆಯಲ್ಲಿ ಸೂರಿಕುಮೇರು ರಾಜ್ಯ ಹೆದ್ದಾರಿಯಲ್ಲಿ ಟೆಂಪೊ ಮತ್ತು ಬೈಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಮೃತ ಪಟ್ಟಿರುವುದಾಗಿ ತಿಳಿದು ಬಂದಿದೆ. ಮೃತರು ಅವಿವಾಹಿತರಾಗಿದ್ದು ತಂದೆ ಗಂಗಾಧರ ಗೌಡ ಮರ್ಗಿಲಡ್ಕ, ತಾಯಿ ಮತ್ತು ಇಬ್ಬರು ಸಹೋದರರನ್ನು, ಹಾಗೂ ಬಂಧು ಮಿತ್ರರನ್ನು ಅಗಲಿದ್ದಾರೆ.ಮೃತ ಯುವಕ ಹಿಂದು ಪರ ಸಂಘಟನೆಯ ಸಕ್ರಿಯ ಕಾರ್ಯಕರ್ತರಾಗಿ ಗುರುತಿಸಿಕೊಂಡಿದ್ದರು.

ಕಲ್ಚರ್ಪೆ ರಸ್ತೆ ಬದಿ ನಿಲ್ಲಿಸಿದ ಲಾರಿಯ ಚಕ್ರ ಕದ್ದೊಯ್ದ ಕಳ್ಳರು– ಪೋಲಿಸ್ ದೂರು

ಪೆರಾಜೆ ಕಲ್ಚರ್ಪೆ ರಸ್ತೆ ಬದಿಯಲ್ಲಿ ನಿಲ್ಲಿಸಿದ ಲಾರಿಯ ಚಕ್ರವನ್ನು ಬಿಚ್ಚಿ ಕಳ್ಳತನ ಮಾಡಿರುವ ಘಟನೆ ಡಿ.3 ರಂದು ವರದಿಯಾಗಿದೆ. ಕೇರಳದ ನೋಂದಣಿ ಸಂಖ್ಯೆ ಹೊಂದಿರುವ ಲಾರಿಯಾಗಿದ್ದು ಕುಂಬಳಚೇರಿಯಲ್ಲಿ ಮರದ ವ್ಯಾಪಾರಕ್ಕೆಂದು ಬಂದವರ ಲಾರಿ ಇದಾಗಿದ್ದು ಕಲ್ಚರ್ಪೆ ರಸ್ತೆ ಬದಿಯಲ್ಲಿ ನಿಲ್ಲಿಸಿದ್ದು ರಾತ್ರಿ ಸಮಯದಲ್ಲಿ ಯಾರೋ ಕಿಡಿಗೇಡಿ ಕಳ್ಳರು ಹೊಂಚು ಹಾಕಿ ಲಾರಿಯ ಹಿಂಬದಿಯ 2 ಚಕ್ರವನ್ನು ಬಿಚ್ಚಿ ಕದ್ದೊಯ್ದಿದ್ದಾರೆ. ಸ್ಟೇಪಿನ್ ಟಯರ್ ನ್ನು ಹಾಗೆ ಬಿಟ್ಟು ಹೋಗಿದ್ದಾರೆ. ಸ್ಥಳೀಯ ಅಂಗಡಿಯಲ್ಲಿ ಇರುವ ಸಿ.ಸಿ.ಟಿವಿ ಫೂಟೇಜ್ ಪರಿಶೀಲಿಸಿದಾಗ ಮುಂಜಾನೆ ಸಮಯದಲ್ಲಿ ಬೇರೊಂದು ಲಾರಿ ಬಂದು ಇದೇ ಲಾರಿ ಪಕ್ಕದಲ್ಲಿ ನಿಲ್ಲಿಸಿದ್ದ ದೃಶ್ಯ ಕಂಡು ಬಂದಿದೆ ಎಂದು ಸ್ಥಳೀಯರು ತಿಳಿಸಿರುತ್ತಾರೆ. ಈ ಬಗ್ಗೆ ಸುಳ್ಳ ಪೋಲಿಸರಿಗೆ ದೂರು ನೀಡಲಾಗಿದ್ದು ಪ್ರಕರಣವನ್ನು ದಾಖಲಿಸಿಕೊಂಡಿರುವುದಾಗಿ ತಿಳಿದು ಬಂದಿದೆ.

ಪೆರಾಜೆ ಗ್ರಾ.ಪಂ. ಮಾಜಿ ಅಧ್ಯಕ್ಷ, ಬಿಜೆಪಿ ನಾಯಕ ಎ.ಸಿ. ಹೊನ್ನಪ್ಪ ನಿಧನ

ಪೆರಾಜೆ ಗ್ರಾಮಪಂಚಾಯತ್ ಮಾಜಿ ಅಧ್ಯಕ್ಷರು, ಪೆರಾಜೆ ಕೃಷಿ ಪತ್ತಿನ ಸಹಕಾರಿ ಸಂಘದ ನಿರ್ದೇಶಕ, ಬಿಜೆಪಿ ಹಿರಿಯ ಮುಖಂಡರಾಗಿದ್ದ ಅಮಚೂರು ಎ.ಸಿ. ಹೊನ್ನಪ್ಪ ಅವರು ಅಲ್ಪ ಕಾಲದ ಅನಾರೋಗ್ಯದಿಂದ ಇಂದು ಮುಂಜಾನೆ ನಿಧನರಾದರು. ಇವರಿಗೆ 72 ವರ್ಷ ವಯಸ್ಸಾಗಿತ್ತು. ಕೆಲ ದಿನಗಳ ಹಿಂದ ಬೈನ್ ಹ್ಯಾಮರೇಜ್ ಗೊಳಗಾಗಿದ್ದ ಇವರನ್ನು ಸುಳ್ಳ ಆಸ್ಪತ್ರೆಗೆ ಕೆತಂದು, ಬಳಿಕ ಮಂಗಳೂರು ಆಸ್ಪತ್ರೆಗೆ ಕರೆದುಕೊಂಡು ಹೋಗಲಾಯಿತು. ಎರಡು ದಿನಗಳ ಹಿಂದೆ ಮತ್ತೆ ಸುಳ್ಳ ಕೆ.ವಿ.ಜಿ. ಆಸ್ಪತ್ರೆಗೆ ಕರೆದುಕೊಂಡು ಬರಲಾಯಿತು. ಇಂದು ಮುಂಜಾನೆ ಅವರು ನಿಧನರಾದರುಮೃತರು ಪತ್ನಿ ಗೀತಾ, ಪುತ್ರ ಸಂಭ್ರತ್ ರಾಜ್, ಪುತ್ರಿ ಸುಶ್ಮಿತಾ, ಸಹೋದರರಾದ ಎ.ಸಿ. ವಸಂತ, ಭರತ್, ಓರ್ವ ಸಹೋದರಿಯನ್ನು ಅಗಲಿದ್ದಾರೆ

ಮುರೂರು : ಓಮಿನಿ ಕಾರು – ಲಾರಿ ಅಪಘಾತ : ಕರ್ಲಪ್ಪಾಡಿಯ ವ್ಯಕ್ತಿ ಮೃತ್ಯು

ಸುಳ್ಯ – ಕಾಸರಗೋಡು ರಸ್ತೆಯ ಕುಂಟಾರು – ಮುರೂರು ಮಧ್ಯೆ ಓಮಿನಿ ಕಾರು ಮತ್ತು ಲಾರಿ ನಡುವೆ ನಡೆದ ಅಪಘಾತದಲ್ಲಿ ಅಜ್ಜಾವರ ಕರ್ಲಪ್ಪಾಡಿಯ ಮಹಮ್ಮದ್ ಕುಂಞಯವರು ಮೃತಪಟ್ಟಿರುವುದಾಗಿ ವರದಿಯಾಗಿದೆ. ಬದಿಯಡ್ಕಕ್ಕೆ ಮಗನನ್ನು ಬಿಟ್ಟು ಬರುತ್ತಿರುವಾಗ ಈ ಅಪಘಾತ ನಡೆದಿದೆ.

ಅರಂತೋಡು : ಅಕ್ರಮದನ ಸಾಗಾಟ – ಪೋಲಿಸರಿಗೊಪ್ಪಿಸಿದ ಭಜರಂಗದಳ

ಅರಂತೋಡು : ಪುತ್ತೂರು ಭಾಗದಿಂದ ಮಂಡ್ಯ ಮೈಸೂರು ಕಡೆಗೆ ಅಕ್ರಮವಾಗಿ ದನ ಸಾಗಾಟ ನಡೆಸುತ್ತಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ಭಜರಂಗದಳವು ತಡೆಯೊಡ್ಡಿ ವಾಹನವನ್ನು ಇದೀಗ ಸುಳ್ಳ ಪೋಲಿಸರಿಗೆ ಒಪ್ಪಿಸಿದ ಘಟನೆ ಇದೀಗ ನಡೆದಿದೆ. ಎರಡು ವಾಹನಗಳಲ್ಲಿ 5 ಹೋರಿಗಳು ಹಾಗು 2 ಹಸುಗಳನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದರೆನ್ನಲಾಗಿದೆ. ವಾಹನ ಚಾಲಕರು ಸೇರಿದಂತೆ ಮೂವರನ್ನು ಪೋಲಿಸರು ಇದೀಗ ಠಾಣೆಗೆ ಕರೆತಂದಿದ್ದು ಈ ಕುರಿತು ತನಿಖೆ ನಡೆಸುತ್ತಿದ್ದಾರೆ. ಅಲ್ಲದೇ ತನಿಖೆ ವೇಳೆಯಲ್ಲಿ ಮೊಬೈಲ್ ನಲ್ಲಿ ಕೈ ಬರಹದಲ್ಲಿರುವ ಚೀಟಿ ಮಾತ್ರ ಲಭ್ಯವಾಗಿದೆ ಎಂದು ತಿಳಿದುಬಂದಿದೆ. ಹೆಚ್ಚಿನ ವಿವರ ನಿರೀಕ್ಷಿಸಲಾಗಿದೆ.

ವರದಿ, ಕಥೆ, ಜಾಹೀರಾತು, ಕವನ ಲೇಖನಗಳನ್ನು ಕಳುಹಿಸಿಕೊಡಿ
WWW.amarasud-di@gmail.com

ಜಾಲ್ಸೂರು : ಅರಣ್ಯ ಇಲಾಖೆಯ ಸಿಬ್ಬಂದಿ ಕುಸಿದು ಬಿದ್ದು ಮೃತ್ಯು

ಸುಳ್ಳದ ಜಾಲ್ಸೂರಿನಲ್ಲಿ ಕರ್ತವ್ಯ ನಿರತ ಫಾರೆಸ್ಟ್ ವಾಚರ್ ಹಠಾತ್ ಕುಸಿದು ಬಿದ್ದು ಮೃತಪಟ್ಟಿರುವ ಘಟನೆ ಡಿ.7ರಂದು ವರದಿಯಾಗಿದೆ. ಜಾಲ್ಸೂರಿನ ಗೇಟಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ವಾಚರ್ ಸದಾಶಿವ (50) ಎಂಬವರೇ ಮೃತಪಟ್ಟ ದುರ್ದೈವಿ. ಅಲ್ಲಿ ಕುಸಿದು ಬಿದ್ದ ಅವರನ್ನು ತಕ್ಷಣ ಸುಳ್ಳದ ಕೆವಿಜಿ ಆಸ್ಪತ್ರೆಗೆ ಕರೆದುಕೊಂಡು ಬರಲಾಯಿತು. ಅಲ್ಲಿಂದ ಹೆಚ್ಚಿನ ಚಿಕಿತ್ಸೆಗೆ ಮಂಗಳೂರಿಗೆ ಕರೆದುಕೊಂಡು ಹೋದರೂ ಫಲಕಾರಿಯಾಗಲಿಲ್ಲವೆನ್ನಲಾಗಿದೆ..

ಸುಳ್ಯದ ರಿಕ್ಷಾ ಚಾಲಕ ನೇಣು ಬಿಗಿದು ಆತ್ಮಹತ್ಯೆ

ಸುಳ್ಳ ಜೂನಿಯರ್ ಕಾಲೇಜು ರಸ್ತೆಯ ರಿಕ್ಷಾ ಪಾರ್ಕಿಂಗ್ ನ ರಿಕ್ಷಾ ಚಾಲಕ, ತೊಡಿಕಾನ ನಿವಾಸಿ ಅಡ್ಯಡ್ಕ ಕೋಣಗುಂಡಿ ದಿ.ಹೊನ್ನಪ್ಪ ಗೌಡರ ಪುತ್ರ ಜಗನ್ನಾಥ (50) ಎಂಬವರು ಸುಳ್ಳದ ಮನೆಯಲ್ಲಿ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ತಿಳಿದುಬಂದಿದೆಅವರು ರಿಕ್ಷಾ ಪಾರ್ಕಿಂಗ್ ಗೆ ಬಂದಿರಲಿಲ್ಲ. ಮಧ್ಯಾಹ್ನ ಆತ್ಮಹತ್ಯೆ

ಹರಿಹರ ಪಳ್ಳತ್ತಡ್ಕ : ಕಸ್ತೂರಿ ರಂಗನ್ ವರದಿ ಜಾರಿಯಾಗದಂತೆ ಗ್ರಾಮಸ್ಥರ ಸಭೆ

ಪಶ್ಚಿಮ ಘಟ್ಟ ಹಾಗೂ ಜನವಸತಿ ಪ್ರದೇಶಗಳಿಗೆ ಗಡಿ ಗುರುತು ಮಾಡಿ ಜಂಟಿ ಸರ್ವೆ ಮಾಡಬೇಕು : ಕಿಶೋರ್ ಶಿರಾಡಿ. ಕಸ್ತೂರಿ ರಂಗನ್ ವರದಿ ಜಾರಿಯಾಗದಂತೆ ಡಿ.15 ರಂದು ಹರಿಹರ ಪಳ್ಳತ್ತಡ್ಕ ಗ್ರಾಮದ ಶ್ರೀ ಹರಿಹರೇಶ್ವರ ಕಲಾಮಂದಿರದಲ್ಲಿ ಹರಿಹರ, ಕಲ್ಮಕಾರು, ಕೊಲ್ಲಮೊಗ್ರು ಹಾಗೂ ಬಾಳುಗೋಡು ಸೇರಿದಂತೆ ನಾಲ್ಕು ಗ್ರಾಮಗಳ ಗ್ರಾಮಸ್ಥರ ಸಭೆ ನಡೆಯಿತು. ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಲೆನಾಡು ಜನಹಿತ ರಕ್ಷಣಾ ವೇದಿಕೆಯ ಕೇಂದ್ರ ಸಮಿತಿ ಸಂಚಾಲಕರಾದ ಕಿಶೋರ್ ಶಿರಾಡಿ ರವರು "ಪಶ್ಚಿಮ ಘಟ್ಟ ಹಾಗೂ ಜನವಸತಿ ಪ್ರದೇಶಗಳಿಗೆ ಗಡಿ ಗುರುತು ಮಾಡಿ ಜಂಟಿ ಸರ್ವೆ ಮಾಡಬೇಕು. ಅಲ್ಲದೇ ಕಾಡು ಪ್ರಾಣಿಗಳಿಂದ ರಕ್ಷಿಸಿಕೊಳ್ಳಲು ಹಾಗೂ ಕಾಡು ಪ್ರಾಣಿಗಳು ಕೃಷಿ ಭೂಮಿಗೆ ಬಂದು

ಹಾನಿ ಮಾಡುವ ಸಂದರ್ಭದಲ್ಲಿ ಗಾಳಿಯಲ್ಲಿ ಗುಂಡು ಹಾರಿಸಲು ರೈತರಿಗೆ ಕೋವಿ ಪರವಾನಗಿ ನೀಡಬೇಕು. ಅಲ್ಲದೇ ಪೂರ್ಣ ಪ್ರಮಾಣದಲ್ಲಿ ಬೂತ್ ಹಾಗೂ ತಾಲೂಕು ಸಮಿತಿಗಳ ರಚನೆ ಮಾಡಿ ತಕ್ಷಣ ಎಲ್ಲಾ ಗ್ರಾಮಗಳಲ್ಲಿ ಆಯಾ ಗ್ರಾಮಗಳ ಬೂತ್ ಸಮಿತಿಯ ಕಾರ್ಯಕರ್ತರು ಆಯಾ ಗ್ರಾಮಗಳ ಪ್ರತೀ ಮನೆ-ಮನೆಗಳಿಗೆ ತೆರಳಿ ಕಸ್ತೂರಿ ರಂಗನ್ ಜಾರಿಯಾಗುವುದರಿಂದ ಉಂಟಾಗುವ ತೊಂದರೆಗಳ ಬಗ್ಗೆ ಜನರಿಗೆ ಮನವರಿಕೆ ಮಾಡಿಸಬೇಕು" ಎಂದರು. ಕಡಬ ಹೋರಾಟ ಸಮಿತಿಯ ಮುಂದಾಳು ಸೈಯದ್ ಮೀರಾ ಸಾಹೇಬ್ ರವರು ಮಾತನಾಡಿ "ಕಡಬ ತಾಲೂಕಿನಲ್ಲಿ ಈಗಾಗಲೇ ಅನೇಕ ಕೃಷಿಕರಿಗೆ ಅರಣ್ಯ ಇಲಾಖೆಯಿಂದ ನೋಟೀಸ್ ಬಂದಿದ್ದು, ಕೃಷಿಕರು ಕಂಗಾಲಾಗಿದ್ದಾರೆ. ಇಂತಹ ಪರಿಸ್ಥಿತಿ ಮುಂದೆ ಬಾರದಂತಾಗಲು ಹೋರಾಟ ಅನಿವಾರ್ಯ" ಎಂದು ಕೃಷಿಕರಿಗೆ ಅರಣ್ಯ ಇಲಾಖೆಯಿಂದ ಬಂದ ನೋಟಿಸ್ ಅನ್ನು ಸಭೆಯಲ್ಲಿ ಓದಿ ಹೇಳಿದರು. ಈ ಸಂದರ್ಭದಲ್ಲಿ ಸಭೆಯಲ್ಲಿ ಶ್ರೀ ಹರಿಹರೇಶ್ವರ ದೇವಸ್ಥಾನದ ವ್ಯವಸ್ಥಾಪನಾ ಸಮಿತಿಯ ಅಧ್ಯಕ್ಷರಾದ ಕಿಶೋರ್ ಕುಮಾರ್ ಕೂಜುಗೋಡು, ಪ್ರಮುಖರಾದ ಚಂದ್ರಶೇಖರ ಬಾಳುಗೋಡು, ಜಯಪ್ರಕಾಶ್ ಕೂಜುಗೋಡು, ಹರಿಹರ ಪಳ್ಳತ್ತಡ್ಕ ಗ್ರಾಮ ಪಂಚಾಯತ್ ಅಧ್ಯಕ್ಷರಾದ ವಿಜಯ ಕುಮಾರ್ ಅಂಜಣ, ಸತೀಶ್.ಟಿ.ಯುನ್, ಚಂದ್ರಹಾಸ ಶಿವಾಲ, ಕೇಶವ ಭಟ್ ಕಟ್ಟ, ಹರೀಶ್ ಬಳ್ಳಡ್ಕ ಹಾಗೂ ನಾಲ್ಕು ಗ್ರಾಮಗಳ ಪ್ರಮುಖರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಗೋಕುಲ್‌ದಾಸ್ ರಿಗೆ ಸಾರ್ವಜನಿಕ ಸನ್ಮಾನಕ್ಕೆ ಸಿದ್ಧತೆ - ಪ್ರೆಸ್ ಕ್ಲಬ್ ನಲ್ಲಿ ಕಾರ್ಯಕ್ರಮದ ಆಮಂತ್ರಣ ಬಿಡುಗಡೆ

ಸುಳ್ಯದಲ್ಲಿ ಕಳೆದ 40 ವರ್ಷಗಳಿಂದ ಸಾರ್ವಜನಿಕ ಸೇವೆ ಸಲ್ಲಿಸುತ್ತಿರುವ ಪ್ರಸ್ತುತ ಈ ಸಾಲಿನ ದ.ಕ. ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾಗಿರುವ ಸುಳ್ಯ ನಗರ ಪಂಚಾಯತ್ ಮಾಜಿ ಸದಸ್ಯ ಕೆ.ಗೋಕುಲ್‌ದಾಸ್ ಅವರಿಗೆ ಸಾರ್ವಜನಿಕ ಅಭಿನಂದನಾ ಕಾರ್ಯಕ್ರಮ ಡಿ.28 ರಂದು ನಡೆಯಲಿದೆ ಎಂದು ಅಭಿನಂದನಾ ಸಮಿತಿ ಅಧ್ಯಕ್ಷ ರಾಧಾಕೃಷ್ಣ ಬೊಳ್ಳೂರು ಹೇಳಿದ್ದಾರೆ. ಅವರು ಪ್ರೆಸ್ ಕ್ಲಬ್ ನಲ್ಲಿ ಆಮಂತ್ರಣ ಬಿಡುಗಡೆಗೊಳಿಸಿ ಕಾರ್ಯಕ್ರಮದ ಬಗ್ಗೆ ವಿವರ ನೀಡಿದರು. ಸುಳ್ಯದ ಲಯನ್ಸ್ ಸೇವಾ ಸದನದಲ್ಲಿ ಡಿ.28 ರಂದು ನಡೆಯುವ ಸಾರ್ವಜನಿಕ ಅಭಿನಂದನಾ ಸಮಾರಂಭದ ಸಭಾ ಕಾರ್ಯಕ್ರಮ ಅಧ್ಯಕ್ಷತೆಯನ್ನು ಅಭಿನಂದನಾ ಸಮಿತಿ ಅಧ್ಯಕ್ಷ ರಾಧಾಕೃಷ್ಣ ಬೊಳ್ಳೂರು ಅಧ್ಯಕ್ಷತೆ ವಹಿಸಲಿದ್ದಾರೆ. ಸೀತಾರಾಮ

ರೈ ಸವಣೂರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕಿ ಭಾಗೀರಥಿ ಮುರುಳ್ಯ, ಬಿ. ರಮಾನಾಥ ರೈ, ಎಸ್. ಅಂಗಾರ, ಶ್ರೀಮತಿ ಶಶಿಕಲಾ ನೀರುಬಿದಿರೆ, ಪದ್ಮರಾಜ್ ಆರ್. ಪೂಜಾರಿ ಉಪಸ್ಥಿತರಿರಲಿದ್ದಾರೆ. ದಿನೇಶ್ ಮಡಪ್ಪಾಡಿ ಅಭಿನಂದನಾ ಭಾಷಣ ಮಾಡಲಿದ್ದಾರೆ. ಗೌರವ ಉಪಸ್ಥಿತರಾಗಿ ಹೆಚ್.ಎಂ. ನಂದಕುಮಾರ್, ನಿತ್ಯಾನಂದ ಮುಂಡೋಡಿ ಆಗಮಿಸಲಿದ್ದಾರೆ ಎಂದರು. ಸಮಿತಿ ಉಪಾಧ್ಯಕ್ಷ ನಾರಾಯಣ ಕೇಕಡ್ಕ ಮಾತನಾಡಿ ರಾಜಕೀಯ,ಜಾತಿ, ಧರ್ಮದ ಭೇದವಿಲ್ಲದೇ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗುತ್ತಿದ್ದ ಗೋಕುಲ್ ದಾಸ್ ಅವರ ಅಭಿನಂದನಾ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಅವರ ಅಭಿಮಾನಿಗಳು ಆಗಮಿಸುವಂತೆ ವಿನಂತಿಸಿದರು. ಪತ್ರಿಕಾಗೋಷ್ಠಿಯಲ್ಲಿ ಸಮಿತಿಯ ಪ್ರ.ಕಾರ್ಯದರ್ಶಿ ಭವಾನಿಶಂಕರ ಕಲ್ಮಡ್ಕ, ಉಪಾಧ್ಯಕ್ಷ ಎಸ್. ಸಂಶುದ್ದೀನ್, ತೀರ್ಥರಾಮ ಜಾಲ್ಸೂರು ಭಾಗವಹಿಸಿದ್ದರು.

ಶೇಣಿ ಗರಡಿ : ನೂತನ ಚಪ್ಪರ ಕೊಂಬು ನಿರ್ಮಾಣದ ಮನವಿ ಪತ್ರ ಬಿಡುಗಡೆ

ಶ್ರೀ ಕೋಟಿ ಚೆನ್ನಯ ಬ್ರಹ್ಮ ಬೈದರ್ಕಳ ಗರಡಿ ಶೇಣಿ ಇದರ ನೂತನ ಚಪ್ಪರ ಕೊಂಬು ಬೆಳ್ಳಿಯ ಆಭರಣ ನಿರ್ಮಾಣದ ಮನವಿ ಪತ್ರ ಬಿಡುಗಡೆ ಕಾರ್ಯಕ್ರಮ ಗರಡಿಯಲ್ಲಿ ನಡೆಯಿತು. ಪ್ರಗತಿಪರ ಕೃಷಿಕ ವೆಂಕಟೇಶ್ ಹೆಬ್ಬಾರ್ ಶೇಣಿ ಮನವಿ ಪತ್ರ ಬಿಡುಗಡೆಗೊಳಿಸಿ ಶುಭಹಾರೈಸಿದರು. ಚಪ್ಪರ ಕೊಂಬು ಸಮಿತಿ ಗೌರವಧ್ಯಕ್ಷ ಕರಿಯಪ್ಪ ಪೂಜಾರಿ ಅಧ್ಯಕ್ಷತೆ ವಹಿಸಿದ್ದರು. ಸಾಮಾಜಿಕ ಮುಖಂಡ ರಾಧಾಕೃಷ್ಣ ಬೊಳ್ಳೂರು, ಲೋಕೇಶ್ ಪೂಜಾರಿ ತಳೂರು, ರವಿಕುಮಾರ್ ಹೊನ್ನಕಡಪು,

ವೃಜೇಶ್ ರೈ ಶೇಣಿ, ನವೀನ್ ಸಾರಕೆರೆ ಉಪಸ್ಥಿತರಿದ್ದರು. ಚಪ್ಪರ ಕೊಂಬು ಸಮಿತಿ ಅಧ್ಯಕ್ಷ ವಿವೇಕ್ ರೈ ಶೇಣಿ ವಂದಿಸಿದರು. ಗರಡಿಯ ಅನುವಂಶಿಕ ಆಡಳ್ತೇದಾರ ಬಿ. ಕೆ ಧರ್ಮಪಾಲ ಶೇಣಿ ಕಾರ್ಯಕ್ರಮ ನಿರ್ವಹಿಸಿದರು.

ಪಯಸ್ವಿನಿ ನದಿಗೆ ನಿರ್ಮಿಸಿರುವ ಅಣೆಕಟ್ಟಿಗೆ ಮಾಜಿ ಪ್ರಧಾನಿ ವಾಜಪೇಯಿ ಹೆಸರು ಇಡುವಂತೆ ಮನವಿ

ಸುಳ್ಯ ನಗರಕ್ಕೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಿರುವ ಪಯಸ್ವಿನಿ ನದಿಗೆ ನಿರ್ಮಿಸಿರುವ ಅಣೆಕಟ್ಟಿಗೆ ಭಾರತದ ಮಾಜಿ ಪ್ರಧಾನಿಯವರಾದ ಅಟಲ್ ಬಿಹಾರಿ ವಾಜಪೇಯಿ ಇವರ ಹೆಸರನ್ನು ಇಡುವಂತೆ ಅಟಲ್ ಬಿಹಾರಿ ವಾಜಿಪೇಯಿರವರ ಅಭಿಮಾನಿಗಳ ಸಂಘ ಸುಳ್ಯ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗೆ ಮನವಿ ಮಾಡಿ ಒತ್ತಾಯಿಸಿದೆ.

ಸುಳ್ಯ ಸೈಂಟ್ ಜೋಸೆಫ್ ಶಾಲೆಯ ಅಶ್ವಿಜ್ ಆತ್ರೇಯ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ

ಸಾರ್ವಜನಿಕ ಶಿಕ್ಷಣ ಇಲಾಖೆ ನಡೆಸಿದ ಪ್ರತಿಭಾ ಕಾರಂಜಿ ಸ್ಪರ್ಧೆಯು ಬೆಳ್ತಂಗಡಿ ಹೋಲಿ ರೆಡೀಮರ್ ವಿದ್ಯಾಸಂಸ್ಥೆಯಲ್ಲಿ ನಡೆದಿದ್ದು ಜಿಲ್ಲಾಮಟ್ಟದ ಪ್ರತಿಭಾಕಾರಂಜಿ ಸ್ಪರ್ಧೆಯಲ್ಲಿ ಹಿರಿಯರ ವಿಭಾಗದ ಮಿಮಿಕ್ರಿ ಸ್ಪರ್ಧೆಯಲ್ಲಿ ಸಂತ ಜೋಸೆಫ್ ಹಿರಿಯ ಪ್ರಾಥಮಿಕ ಶಾಲೆಯ ಏಳನೇ ತರಗತಿಯ ವಿದ್ಯಾರ್ಥಿ ಅಶ್ವಿಜ್ ಆತ್ರೇಯ ಸುಳ್ಯ ಇವರು ಪ್ರಥಮ ಸ್ಥಾನ ಪಡೆಯುವ ಮೂಲಕ ಸುಳ್ಯವನ್ನು ಜಿಲ್ಲಾ ಮಟ್ಟದಲ್ಲಿ ಗುರುತಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಮತ್ತು ದೇಶಭಕ್ತಿ ಗೀತೆಯಲ್ಲಿ ದ್ವಿತೀಯ ಸ್ಥಾನ ಪಡೆದಿರುತ್ತಾರೆ. ಇವರನ್ನು ಶಾಲಾ ಸಂಚಾಲಕರಾದ ಫಾದರ್ ವಿಕ್ಟರ್

ಡಿ ಸೋಜಾ ಮುಖ್ಯೋಪಾಧ್ಯಾಯಿನಿ ಮೇರಿ ಸ್ಟೆಲ್ಲಾ ಹಾಗೂ ಶಿಕ್ಷಕರು ಅಭಿನಂದಿಸಿರುತ್ತಾರೆ. ಅಧ್ಯಾಪಕಿ ಶ್ರೀಮತಿ ಹೇಮಾವತಿ ಸಹಕಾರ ನೀಡಿರುತ್ತಾರೆ. ಇವರು ಸುಳ್ಯದ ನ್ಯೂಸ್ ಪೇಪರ್ ವಿಜನ್ಸಿಯಾದ ಪ್ರಭು ಬುಕ್ ಸೆಂಟರ್ ನ ಮಾಲಕರಾದ ಶ್ರೀಮತಿ ಉಷಾ ಮತ್ತು ರಾಮಚಂದ್ರ ಜಿ .ಎಸ್ ಇವರ ಸುಪುತ್ರಪಥ್ಯ ಮತ್ತು ಪಥ್ಯೇತರ ಚಟುವಟಿಕೆಗಳಲ್ಲಿ ಮುಂದಿರುವ ಇವರು ಬಹುಮುಖ ಪ್ರತಿಭೆ ಹೊಂದಿರುವ ಬಾಲಕ ಗಾಯನ, ನಟನೆ, ಮಾಡೆಲಿಂಗ್, ಯಕ್ಷಗಾನ ಹೀಗೆ ಹಲವಾರು ಕ್ಷೇತ್ರದಲ್ಲಿ ರಾಜ್ಯ ರಾಷ್ಟ್ರಮಟ್ಟದಲ್ಲಿ ಗುರುತಿಸುವತ್ತ ದಾಪುಗಾಲು ಹಾಕುತ್ತಿರುವ ಪುಟ್ಟ ಬಾಲಕ ಧಾರವಾಹಿ ಚಲನಚಿತ್ರ ಮುಖ್ಯ ಪಾತ್ರದಲ್ಲಿ ನಟಿಸಿದ್ದು ಹಲವು ಪ್ರತಿಷ್ಠಿತ ವೇದಿಕೆಗಳಲ್ಲಿ ತನ್ನ ಗಾಯನ ಪ್ರದರ್ಶನ ನೀಡಿ ಸನ್ಮಾನ ಪ್ರಶಸ್ತಿಗಳನ್ನು ಪಡೆದಿರುತ್ತಾರೆ.

ಅಖಿಲ ಭಾರತ ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತ್ಯ ಕ್ಷೇತ್ರದ ಸಾಧನೆಗಾಗಿ ಸನ್ಮಾನಕ್ಕೆ ಆಯ್ಕೆಯಾದ ಸುಬ್ರಾಯ ಸಂಪಾಜೆ

ಮಂಡ್ಯದಲ್ಲಿ ನಡೆಯುವ 87ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತ್ಯ ಕ್ಷೇತ್ರದಲ್ಲಿ ಮಾಡಿದ ಸಾಧನೆಗಾಗಿ ಸುಬ್ರಾಯ ಸಂಪಾಜೆಯವರು ಸನ್ಮಾನ ಪಡೆಯಲಿದ್ದಾರೆ. ಸುಳ್ಯದ ಸಂಪಾಜೆಯವರಾದ ಇವರು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣವನ್ನು ಸಂಪಾಜೆಯಲ್ಲಿ ಪೂರೈಸಿದ ಸುಬ್ರಾಯರು ಸುಳ್ಯ ನೆಹರೂ ಸ್ಮಾರಕ ಮಹಾ ವಿದ್ಯಾಲಯದಲ್ಲಿ ಬಿ.ಎ. ಓದಿ ಮುಂದೆ ಮಂಗಳೂರು ವಿಶ್ವ ವಿದ್ಯಾಲಯದಿಂದ ಕನ್ನಡ ಎಂ.ಎ. ಪದವಿ ಪಡೆದರು. 1995 ರಲ್ಲಿ ಮಡಿಕೇರಿ ಆಕಾಶವಾಣಿಗೆ ಉದ್ಘೋಷಕರಾಗಿ ನೇಮಕಗೊಂಡ ಇವರು ಬಾನುಲಿಯ ಸೇವೆಯ ಜೊತೆಗೆ ಗಮಕ, ಯಕ್ಷಗಾನ ಹಾಡುಗಾರಿಕೆ ಮತ್ತು ಸಾಹಿತ್ಯ ಕ್ಷೇತ್ರಗಳಲ್ಲಿ ತನ್ನನ್ನು ಸಕ್ರಿಯವಾಗಿ ತೊಡಗಿಸಿಕೊಂಡರು. " ಪುಟ್ಟಕ್ಕ" ಇದು ಸುಬ್ರಾಯ ಸಂಪಾಜೆಯವರು ಬರೆದ ಕಿರು ಕಾದಂಬರಿ. ಇವರ "ರಸ ರಾಮಾಯಣ" ಮೂಲ ರಾಮಾಯಣವನ್ನಾಧರಿಸಿದ ರಸಪ್ರಶ್ನೆ ಪುಸ್ತಕ. "ಕೊಡಗು ಕ್ವಿಝ್" ಕೊಡಗು ಜಿಲ್ಲೆಗೆ ಸಂಬಂಧಿಸಿದ ಮಾಹಿತಿ ಕೋಶ. ವಿದ್ವತ್ ವಲಯದಲ್ಲಿ ಸಂಪಾಜೆಯವರಿಗೆ ಅಪಾರ ಜನಪ್ರಿಯತೆ ಮತ್ತು ಗೌರವ ತಂದುಕೊಟ್ಟ ಅಧ್ಯಯನ ಗ್ರಂಥ "ಪುರಾಣ ಯಾನ". ಇದು ಸಂಸ್ಕೃತದ ಹದಿನೆಂಟು ಮತ್ತು ಇತರ ಪುರಾಣ ಗ್ರಂಥಗಳನ್ನು ಆದ್ಯಂತ ಓದಿ ಬರೆದ ಪಾತ್ರ

ಪರಿಚಯ ಕೃತಿ. ಈ ಗ್ರಂಥವು ಉಡುಪಿ ಯಕ್ಷಗಾನ ಅಧ್ಯಯನ ಕೇಂದ್ರದಲ್ಲಿ ಮಕ್ಕಳಿಗೆ ಪಠ್ಯ ಪುಸ್ತಕವಾಗಿದೆ. ಯಕ್ಷಗಾನ ಹವ್ಯಾಸಿ ಭಾಗವತರಾಗಿ ಇವರು ಕೊಡಗು, ಮೈಸೂರು, ಬೆಂಗಳೂರು, ಮಂಗಳೂರು, ಕಾಸರಗೋಡು, ಮುಂಬೈ ಹೀಗೆ ಹಲವೆಡೆ ಯಕ್ಷಗಾನ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದಾರೆ. 2011ರಲ್ಲಿ ಮೂಡಬಿದಿರೆಯಲ್ಲಿ ನಡೆದ ಹವ್ಯಾಸಿ ಭಾಗವತರ ಹಾಡುಗಾರಿಕೆ ಸ್ಪರ್ಧೆಯಲ್ಲಿ ಇವರು ಪ್ರಥಮ ಸ್ಥಾನದಿಂದ ಪುರಸ್ಕೃತರಾಗಿದ್ದಾರೆ. ಆಕಾಶವಾಣಿಯಲ್ಲಿ ಸಮಗ್ರ ಕನ್ನಡ ಸಾಹಿತ್ಯವನ್ನು "ನಾಡ ಕಣ್ಮಣಿಗಳು" ಸರಣಿಯ ಮೂಲಕ ಇವರು ಶ್ರೋತೃಗಳಿಗೆ ಪರಿಚಯಿಸಿದವರು. ಸ್ವತಃ ಗಮಕಿಯೂ ಆಗಿರುವ ಸಂಪಾಜೆಯವರು ಗಮಕದ ಮೂಲಕ ಕುಮಾರವ್ಯಾಸ, ಲಕ್ಷ್ಮೀಶ ಮತ್ತು ರಾಘವಾಂಕನ ಕಾವ್ಯಗಳನ್ನು ಕೊಡಗಿನ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಗೆ ಪರಿಚಯಿಸಿದರು. ಸಾಮಾಜಿಕ ಕಳಕಳಿ ಉಳ್ಳ ರೇಡಿಯೋ ಸಂದೇಶಗಳನ್ನು ಸಿದ್ಧಪಡಿಸಿ ಪ್ರಸಾರ ಮಾಡಿರುವುದು ಇವರ ರೇಡಿಯೋ ಸೇವಾವಧಿಯ ಗಮನಾರ್ಹ ಅಂಶವಾಗಿದೆ. ಪರಿಸರ, ಶಿಕ್ಷಣ, ಸಮಾಜ ಸೇವೆ ಇಂಥ ವಿಷಯಗಳನ್ನು ಒಳಗೊಂಡ ಸುಮಾರು ಮುನ್ನೂರೈವತ್ತು ರೇಡಿಯೋ ಜಿಂಗಲ್ ಅಥವಾ ಸಂದೇಶಗಳನ್ನು ಇವರು ಸಿದ್ಧಪಡಿಸಿದ್ದಾರೆ. ಸಮಗ್ರ ಭಾರತದ ಆಕಾಶವಾಣಿ ಕೇಂದ್ರಗಳಲ್ಲಿ ಸೇವಾರೂಪದಲ್ಲಿ ಈ ಬಗೆಯ ಸೇವೆ ಸಲ್ಲಿಸಿದವರು ಇವರೊಬ್ಬರೇ ಎನ್ನುವುದು ಇವರ ಹೆಗ್ಗಳಿಕೆ. ಈ ಸೇವೆಗಾಗಿ 2014-15 ರಲ್ಲಿ ಇವರು ರಾಜ್ಯಮಟ್ಟದ ಪುರಸ್ಕಾರವನ್ನು ಪಡೆದಿದ್ದಾರೆ. 27ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನದಲ್ಲಿ ಸನ್ಮಾನ ಪಡೆಯುತ್ತಿರುವ ಸುಬ್ರಾಯ ಸಂಪಾಜೆ ಅವರಿಗೆ ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರ ಪರವಾಗಿ ಜಿಲ್ಲಾಧ್ಯಕ್ಷ ಎಂ.ಪಿ ಕೇಶವ ಕಾಮತ್ ಅಭಿನಂದಿಸಿರುತ್ತಾರೆ ಎಂದು ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಅಜ್ಜಾವರ : ಫುಟ್ಬಾಲ್ ಪಂದ್ಯಾಟ - ಬಹುಮಾನ ವಿತರಣೆ

ಫೈಹ ಯುನೈಟೆಡ್ ಸ್ಪೋರ್ಟ್ಸ್ ಕ್ಲಬ್ ಅಡ್ಕ ಅಜ್ಜಾವರ ಇದರ ವತಿಯಿಂದ ನಡೆದ ಫುಟ್ಬಾಲ್ ಪಂದ್ಯಾಟದ ಬಹುಮಾನ ವಿತರಣೆ ನಡೆಯಿತು. ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಟಿ ಎಂ ಶಾಹಿದ್ ತೆಕ್ಕಿಲ್ ,ಕರ್ನಾಟಕ ಸರಕಾರದ ಅರೆಭಾಷೆ ಸಂಸ್ಕೃತ ಮತ್ತು ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾದ ಸದಾನಂದ ಮಾವಜಿಯವರು ಬಹುಮಾನ ವಿತರಿಸಿದರು. ಅಜ್ಜಾವರ ಗ್ರಾಮ ಪಂಚಾಯತ್ ಅಧ್ಯಕ್ಷೆ ದೇವಕಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ನಗರ ಪಂಚಾಯತ್ ಸದಸ್ಯ ಶರೀಫ್ ಕಂಠಿ, ಅಬ್ದುಲ್ ರಹ್ಮಾನ್ ಸಂಕೇಶ್, ಮಜೀದ್ ಸಿಟಿ ಮೆಡಿಕಲ್, ಅಬ್ಬಾಸ್ ಎ ಬಿ, ಶೌಕತ್ ಆಲಿ ಮೇನಾಲ ಮೊದಲಾದವರು ಉಪಸ್ಥಿತರಿದ್ದರು.

ಮಡಪ್ಪಾಡಿ :- ಪ್ರಗತಿ ಬಂಧು ಸ್ವಸಹಾಯ ಸಂಘಗಳಿಗೆ ಲಾಭಾಂಶ ವಿತರಣಾ ಕಾರ್ಯಕ್ರಮ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ ಸಿ ಟ್ರಸ್ಟ್(ರಿ) ಸುಳ್ಯ ತಾಲೂಕು ಇದರ ವತಿಯಿಂದ ಬಲ್ಕಜೆ ಮತ್ತು ಮಡಪ್ಪಾಡಿ ಒಕ್ಕೂಟಗಳ ಸಂಘಗಳಿಗೆ ಲಾಭಾಂಶ ವಿತರಣಾ ಕಾರ್ಯಕ್ರಮವನ್ನು ಒಕ್ಕೂಟದ ಅಧ್ಯಕ್ಷರಾದ ಗೋಪಾಲಕೃಷ್ಣ ರವರ ಅಧ್ಯಕ್ಷತೆಯಲ್ಲಿ ನಡೆಸಲಾಯಿತು. ಈ ಕಾರ್ಯಕ್ರಮವನ್ನು ಜನಜಾಗೃತಿ ವೇದಿಕೆ ಗುತ್ತಿಗಾರು ವಲಯದ ಅಧ್ಯಕ್ಷರಾದ ಮಿತ್ರದೇವ ಮಡಪ್ಪಾಡಿ ರವರು ದೀಪ ಪ್ರಜ್ವಲ್ಲಿಸುವ ಮುಖೇನಾ ಚಾಲನೆಯನ್ನು ನೀಡಿ ಮಾತಾನಾಡುತ್ತ, ಯೋಜನೆಯು ನಡೆದು ಬಂದ ದಾರಿ ಮತ್ತು ಅದರಿಂದ ನಾವು ಪ್ರಯೋಜನಗಳನ್ನು ಪಡೆದು ಅಭಿವೃದ್ಧಿಗೊಂಡಿದ್ದೇವೆ, ಇದನ್ನು ನಾವು ಯಾವತ್ತು ಕೂಡ ಮರೆಯಬಾರದು, ಜನಜಾಗೃತಿ ಕಾರ್ಯಕಮದಲ್ಲಿ ಎಷ್ಟೋ ಜನ ದುಶ್ಚಾಟಗಳಿಂದ ದೂರವಿದ್ದು, ಇದರಿಂದ ತುಂಬಾ ಕುಟುಂಬಗಳು ಅಭಿವೃದ್ಧಿಗೊಂಡಿದೆ. ಇದಕ್ಕೆ ಎಲ್ಲಾ ಪ್ರೇರಣೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನೀಡಿದೆ ಎಂದು ಹೇಳಿದರು. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಕ್ಷೇತ್ರ ಯೋಜನಾಧಿಕಾರಿಯವರಾದ ಮಾಧವ ಗೌಡರವರು ಮಾತಾನಾಡುತ್ತಾ, ಸುಳ್ಯ ತಾಲೂಕಿನಲ್ಲಿ 2005 ನೇ ಇಸವಿಯಲ್ಲಿ ಯೋಜನೆ ಪ್ರಾರಂಭಗೊಂಡಿದ್ದು, ಪ್ರಾರಂಭದಲ್ಲಿ ನಾವೆಲ್ಲಾ ನಮ್ಮ ಕುಟುಂಬಗಳು ಯಾವ ಪರಿಸ್ಥಿತಿಯಲ್ಲಿ ಇತ್ತು. ಇದೀಗ ಯೋಜನೆಯಿಂದ ನಮ್ಮ ಕುಟುಂಬಗಳು, ನಮ್ಮ ಗ್ರಾಮಗಳು,

ಯಾವ ರೀತಿ ಅಭಿವೃದ್ಧಿ ಗೊಂಡಿದೆ ಎ0ದು ಎಲ್ಲಾರಿಗೂ ಗೊತ್ತಿರಿರುವ ವಿಚಾರವಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ನಮ್ಮ ಯೋಜನೆಯ ಕಾರ್ಯಕ್ರಮಗಳನ್ನು ನೋಡಲು ಆಗದೆ ಅಸೂಯೆಪಡುತ್ತಿದ್ದಾರೆ. ಇದಕ್ಕೆಲ್ಲಾ ನಾವು ಒಗ

ಶ್ರೀ ಬಜಪ್ಪಿಲ ಇರುವೆರ್ ಉಳ್ಳಾಕುಲು

ಶ್ರೀ ಧೂಮವತಿ ಮತ್ತು ಪರಿವಾರ ದೈವಗಳ ಕ್ಷೇತ್ರ ಪೇರಾಲು

ಪುನರ್ ಪ್ರತಿಷ್ಠಾ ಬ್ರಹ್ಮಕಲಶೋತ್ಸವ

ಶುಭಕೋರುವ

2024 ಡಿಸೆಂಬರ್ 21 ಮತ್ತು 22



ಶ್ರೀಮತಿ ಸ್ವಾತಿ
ಶ್ರೀ ಪ್ರವೀಣ್ ಕುಮಾರ್
ಬಾಳೆಕೋಡಿ
& ಮನೆಯವರು

ರಾಜಣ್ಣ
ಪೇರಾಲುಮೂಲೆ
ಕಾರ್ಯದರ್ಶಿ
ಜೀರ್ಣೋದ್ಧಾರ ಸಮಿತಿ
ಶ್ರೀಕ್ಷೇತ್ರ ಬಜಪ್ಪಿಲ
& ಮನೆಯವರು

ಕೇಶವ ಗೌಡ
ಪೇರಾಲು
ಬಾಳೆಕೋಡಿ
ಉಪಾಧ್ಯಕ್ಷ
ಜೀರ್ಣೋದ್ಧಾರ ಸಮಿತಿ
ಶ್ರೀಕ್ಷೇತ್ರ ಬಜಪ್ಪಿಲ
ಮತ್ತು ಮನೆಯವರು

ಮಂಜುನಾಥ ಪಿ.
ಪೇರಾಲು
ಕಾರ್ಯದರ್ಶಿ
ಜೀರ್ಣೋದ್ಧಾರ ಸಮಿತಿ
ಶ್ರೀಕ್ಷೇತ್ರ ಬಜಪ್ಪಿಲ
ಮತ್ತು ಮನೆಯವರು

ಶ್ರೀಮತಿ ಪ್ರತಿಭಾ & ಶ್ರೀ ಜಯರಾಮ
ಗೌಡರಮನೆ
ಸನ್ಮಿತ ಗೌಡರಮನೆ–ಸನ್ಮಿಕೃಷ್ಣ ಗೌಡರಮನೆ

ದಿನೇಶ್ ರೈ & ಮನೆಯವರು

ಪೇರಾಲು
ದರ್ಖಾಸ್ತು
ಅರ್ಚಕರು
ಶ್ರೀಕ್ಷೇತ್ರ ಬಜಪ್ಪಿಲ

ಕೌಶಿಕ್ ಮತ್ತು ಮನೆಯವರು

ಗೌಡರಮನೆ
ಶ್ರೀಕ್ಷೇತ್ರ
ಬಜಪ್ಪಿಲ



ಪದ್ಮನಾಭ ಸೊರಂಜ ಪೇರಾಲು
ಬಿ.ಎಸ್.ಎಫ್.ಜಮ್ಮು
ಶ್ರೀಮತಿ ಸುಶೀಲ ಸುಷ್ಮಾ–ಕಾರ್ತಿಕ್

ಶ್ರೀ ಕೇಶವ ಜಬಳೆ
ಶ್ರೀಮತಿ ಉಷಾ ಕೇಶವ
ಅಂಕಿತಾ ಜೆ.ಕೆ. – ಅಕ್ಷಯ್ ಜೆ.ಕೆ.
ಶ್ರೀಗುರು ಕೆಟರಿಂಗ್ ಪೇರಾಲು

ಶ್ರೀ ಕೃಷ್ಣಪ್ರಸಾದ್
ಶ್ರೀಮತಿ ಕೀರ್ತಿ
ಮಿಂಚಿಪದವು
ಬೇಬಿ ಪ್ರಕೃತಿ

ಗೌತಮ್ ಅಜಿಲ ಅಡ್ತಲೆ

ದೈವ
ನರ್ತಕರು
9483261710

ಹರಿಪ್ರಸಾದ್ ವೈ.
ಯಾವಟೆ
& ಮನೆಯವರು

ತೀರ್ಥೇಶ್ ಬಲಂದೋಟಿ

ಕೋಶಾಧಿಕಾರಿ
ಜೀರ್ಣೋದ್ಧಾರ ಸಮಿತಿ
ಶ್ರೀಕ್ಷೇತ್ರ ಬಜಪ್ಪಿಲ
ಮತ್ತು ಮನೆಯವರು

ಮೇದಪ್ಪ
ಪೇರಾಲುಮೂಲೆ
ಮತ್ತು ಮನೆಯವರು

ಅಶ್ವಿನ್
ಪೇರಾಲುಮೂಲೆ
ಮತ್ತು ಮನೆಯವರು

ಶಾಮಯ್ಯ ಗೌಡ
ಕೆ.ಎಸ್.ಕೆಟರರ್ಸ್
ಪೇರಾಲು ಅಂಬ್ರೋಟಿ
ನಮ್ಮಲ್ಲಿ ಸಭೆ ಸಮಾರಂಭಗಳಿಗೆ ಎಲ್ಲಾ ತರಹದ ಸಸ್ಯಹಾರಿ & ಮಾಂಸಾಹಾರಿ ಅಡುಗೆ ಮಾಡಿಕೊಡಲಾಗುವುದು.
ಮೊ : 9448572829, 8747520089

ವಿದ್ಯಾ ಶಾಮಿಯಾನ
ಶ್ರೀರಾಂ ಪೇಟೆ ಸುಳ್ಯ
ನಮ್ಮಲ್ಲಿ ಸಭೆ ಸಮಾರಂಭಗಳಿಗೆ ಬೇಕಾದ ಟೇಬಲ್, ಚೆಯರ್, ಪಾತ್ರೆಗಳು, ಶೀಟ್, ಹಾಲೆತಟ್ಟೆ ಇನ್ನಿತರ ಅಡುಗೆ ಸಾಮಾಗ್ರಿಗಳು ದೊರೆಯುತ್ತದೆ.
ವೇದಿಕೆ ನಿರ್ಮಾಣ ಮಾಡಿಕೊಡಲಾಗುವುದು

9449140799, 8722230499 ಮಾ : ಮಧುಸೂಧನ್

ಶ್ರೀ ಪಾದ ಸಿವಿಲ್ ಇಂಜಿನಿಯರ್ ಕನ್ಸಲ್ಟೆನ್ಸಿ & ಸರ್ವೀಸ್
ಪ್ರಥಮ ಮಹಡಿ,ಕೆದಂಬಾಡಿ ಕಾಂಪ್ಲೆಕ್ಸ್
ಶ್ರೀರಾಂಪೇಟೆ, ಸುಳ್ಯ
ಮಾ। ಶ್ಯಾಮ್ ಪ್ರಸಾದ್ ಎ.ಡಿ.
ಮೊ:9448216693

ನಾರಾಯಣ
ಬಾಳೆಕೋಡಿ
ಪೇರಾಲು
ಮತ್ತು
ಮನೆಯವರು

ಶಿವಪ್ರಸಾದ್
ಪೇರಾಲು
ಮತ್ತು
ಮನೆಯವರು

ಪ್ರೀತಿ ಸೌಹಾರ್ದತೆಯ ಹಬ್ಬ ಕ್ರಿಸ್‌ಮಸ್

ಡಿಸೆಂಬರ್ 25

ಯೇಸು ಕ್ರಿಸ್ತ ಜನಿಸಿದ ದಿನವನ್ನು ಕ್ರಿಸ್‌ಮಸ್ ಹಬ್ಬವನ್ನಾಗಿ ನಮ್ಮ ದೇಶದಲ್ಲೂ ವಿಜರಂಭಣೆಯಿಂದ ಆಚರಿಸುತ್ತಾರೆ. ಇಡೀ ವಿಶ್ವಕ್ಕೆ ಶಾಂತಿಯ ಸಂದೇಶವನ್ನು ಸಾರಿದ ಯೇಸು ಕ್ರಿಸ್ತ ಜನಿಸಿದ ದಿನವನ್ನು ಪ್ರತಿವರ್ಷ ಕ್ರಿಸ್‌ಮಸ್ ಹಬ್ಬವಾಗಿ ಆಚರಿಸಲಾಗುತ್ತದೆ. ಜೋಸೆಫ್ ಮತ್ತು ಮೇರಿಯ ಪುತ್ರನಾಗಿ ಡಿಸೆಂಬರ್ 25ರಂದು ಯೇಸು ಜನಿಸುತ್ತಾನೆ. ಈ ದಿನವನ್ನು ಕ್ರೈಸ್ತ ಬಾಂಧವರು ಚರ್ಚ್ ಹಾಗೂ ಮನೆಗಳಲ್ಲಿ ಕ್ರಿಸ್‌ಮಸ್ ಟ್ರೀ ಹಾಗೂ ಬಾಲ ಏಸುವಿನ ಆಲಂಕಾರ ಮಾಡಿ ಸಂಭ್ರಮಿಸುತ್ತಾರೆ, ಮಕ್ಕಳು ಹಾಗೂ ಹಿರಿಯರು ಸಾಂತಾಕ್ಲಾಸ್ ವೇಷ ಧರಿಸಿ ಮನರಂಜನೆ ಮೂಲಕ ಹಬ್ಬವನ್ನು ಆಚರಿಸುತ್ತಾರೆ.

ಶುಭಕೋರುವ

Head mistress

Wishing you a Merry Christmas and a happy new year. May this Christmas season fill your home with warmth , light and joy.

Staff , Management and Students
Blessed Kuriakose English Medium
High School, Guthigar Ph: 9448434016

ಸಂತ ಬ್ರಿಜಿಡ್ಸ್ ಚರ್ಚ್ ಸುಳ್ಯ

ರೆ ಫಾ ವಿಕ್ಟರ್ ಡಿ'ಸೋಜಾ

ಧರ್ಮ ಗುರುಗಳು ಹಾಗೂ
ಕೆಥೋಲಿಕ್ ಬಾಂಧವರು
ಸಂತ ಜೋಸೆಫ್ ಶಿಕ್ಷಣ ಸಂಸ್ಥೆಗಳು
& ಸಂತ ಬ್ರಿಜಿಡ್ಸ್ ಶಾಲೆ ಸುಳ್ಯ

ಧರ್ಮಗುರುಗಳು, ಉಪಾಧ್ಯಕ್ಷರು
ಚರ್ಚ್ ಪಾಲನಾ ಮಂಡಳಿ
ಹಾಗೂ ಭಕ್ತಾಧಿಗಳು
ಸಂತ ರೀತಮ್ಮ ಚರ್ಚ್, ಪಂಜ

ಸುಳ್ಯ ತಾಲೂಕು ಕ್ರೈಸ್ತ ಅಲ್ಪಸಂಖ್ಯಾತರ ವಿವಿಧೋದ್ದೇಶ ಸಹಕಾರಿ ಸಂಘ ನಿ. ಸುಳ್ಯ
ಡಿ.ಆರ್.ಪಿ.ಎಸ್.9 ಆರ್.ಜಿ.ಎನ್. 25943 /2010-11
ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ಸಿಬ್ಬಂದಿ ವರ್ಗ
ಅಧ್ಯಕ್ಷರು, ಉಪಾಧ್ಯಕ್ಷರು
ನಿರ್ದೇಶಕರು ಹಾಗೂ ಸರ್ವ ಸದಸ್ಯರು
ಪ್ಲಾಟಿನಂ ಕಾಂಪ್ಲೆಕ್ಸ್, ಜ್ಯೋತಿ ಸರ್ಕಲ್, ಸುಳ್ಯ
ಫೋ : 9008739453
Email: stcmmcs@yahoo.com
ಪ್ರಧಾನ ಕಛೇರಿ : ಸುಳ್ಯ ಶಾಖೆ : ಕಡಬ

ಸೈಂಟ್ ಮೇರಿಸ್ ಇಂಡಸ್ಟ್ರೀಸ್ ಎಲಿಮಲೆ

Mob: 9741489811, 9535808311

ನಮ್ಮಲ್ಲಿ ಹಾರ್ಡ್‌ವೇರ್ ಐಟಂಗಳು, ಪೈಂಟ್, ಪೈಪ್, ಫಿಟ್ಟಿಂಗ್‌ಗಳು, ಸ್ಯಾನಿಟರಿವೇರ್ ಸಿಮೆಂಟ್ ಉತ್ಪನ್ನಗಳು, ಇಂಟರ್ ಲಾಕ್, ಸಾಲಿಡ್ ಬ್ಲಾಕ್ ದೊರೆಯಲಿದೆ.

JSW | TATA STEEL | SUPREME STEEL PIPE CORP | UltraTech CEMENT

ಅಸ್ಸಿ
ಮೊನಾಅಸಾ
ಮಾಜಿ ಉಪಾಧ್ಯಕ್ಷರು
ಹಾಲಿ ಸದಸ್ಯರು
ಗ್ರಾ. ಪಂ. ಸಂಪಾಜೆ

ಅಬ್ರು ಜೋಸ್
ಕರಾವಳಿ ರಬ್ಬರ್ ಟ್ರೇಡರ್ಸ್
ಗುತ್ತಿಗಾರು
ಸಹ ಸಂಸ್ಥೆ
ಅರ್ಬನ್ ನೆಸ್ಟ್ ಗ್ರೊಸರಿ, ದುಗಲಡ್ಕ

Printed, Published & Edited by Muralidhara A, Owned by Muralidhara A, Addanapare House, P.O & Villege Guthigar, Sullia Taluk D.K , Published from 2nd Floor, Vinayaka Complex, Carstreet Sullia, D.K 574239 & Printed at Digantha Mudrana Ltd, Manglore D.K.